# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –234 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 09–04–2025 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 234 | RNI No: KARKAN/2023/88462 | KA/SK/CTA-874/2024-2026 | Chitradurga | Date: 09-04-2025 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ರಾಜ್ಯದ ಗುತ್ತಿಗೆದಾರರ ಸಮಸ್ಯೆ ಪರಿಹರಿಸುವಲ್ಲಿ ಪ್ರಾಮಾಣಿಕ ಪ್ರಯತ್ನ: ಸಚಿವ 2
ಕೃಷಿ ಹೊಂಡ ಹಾಗೂ ಕಲ್ಲು ಕ್ವಾರಿಗಳಿಗೆ ತಂತಿಬೇಲಿ ಅಳವಡಿಸಿ 3
ರಾಮ ನಾಮವ ಜಪಿಸೋ, ಹೇ ಮನುಜ, ರಾಮ ನಾಮವ ಜಪಿಸೋ.... 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಏ.14ರಂದು ಅಂಬೇಡ್ಕರ್ 134ನೇ ಜನ್ಮ ದಿನಾಚರಣೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಇದೇ ಏಪ್ರಿಲ್ 14ರಂದು ಬೆಳಿಗ್ಗೆ 11ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್‌ರವರ 134ನೇ ಜನ್ಮ ದಿನಾಚರಣೆ ಆಯೋಜಿಸಲಾಗಿದೆ. ಡಾ.ಬಿ.ಆರ್. ಅಂಬೇಡ್ಕರ್‌ರವರ 134ನೇ ಜನ್ಮ ದಿನಾಚರಣೆ ಅಂಗವಾಗಿ ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಹೊಳಲ್ಕೆರೆ ರಸ್ತೆಯ ಕನಕವೃತ್ತದಿಂದ ಮೆರವಣಿಗೆ ಪ್ರಾರಂಭವಾಗಿ, ತರಾಸು ರಂಗಮಂದಿರದವರೆಗೆ ಮೆರವಣಿಗೆ ನಡೆಯಲಿದೆ. ಕಾರ್ಯಕ್ರಮಕ್ಕೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಸಮುದಾಯದ ಮುಖಂಡರುಗಳು, ಸಂಘಟನೆಗಳ ಪದಾಧಿಕಾರಿಗಳು, ಎಲ್ಲಾ ಸಾರ್ವಜನಿಕರು ಮೆರವಣಿಗೆಯಲ್ಲಿ ಮತ್ತು ಕಾರ್ಯಕ್ರಮದಲ್ಲಿ ಹಾಜರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

### ದಾವಣಗೆರೆ ಜಿಲ್ಲೆಗೆ ಶೇ.69.45 ಫಲಿತಾಂಶ, ರಾಜ್ಯದಲ್ಲಿ 20ನೇ ಸ್ಥಾನ

» ದಾವಣಗೆರೆ

ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟವಾಗಿದ್ದು, ಜಿಲ್ಲೆಯಲ್ಲಿ ಪರೀಕ್ಷೆ ಬರೆದ 19161 ವಿದ್ಯಾರ್ಥಿಗಳಲ್ಲಿ 13308 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಜಿಲ್ಲೆಗೆ ಶೇ.69.45 ರಷ್ಟು ಫಲಿತಾಂಶ ಬಂದಿದ್ದು ರಾಜ್ಯದಲ್ಲಿ 20ನೇ ಸ್ಥಾನ ಪಡೆದಿದೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಬಸಪ್ಪ ತಿಳಿಸಿದ್ದಾರೆ. ವಿಜ್ಞಾನ ವಿಭಾಗದಲ್ಲಿ 11402 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದ್ದು, 9451 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ 82.89, ವಾಣಿಜ್ಯ ವಿಭಾಗದಲ್ಲಿ 3790 ವಿದ್ಯಾರ್ಥಿಗಳು ಪರೀಕ್ಷೆ ಬರೆದು ಈ ಪೈಕಿ 2296 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ 60.58, ಕಲಾ ವಿಭಾಗದಲ್ಲಿ 3969 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದ್ದು, ಅದರಲ್ಲಿ 1561 ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ 39.33 ರಷ್ಟು ಫಲಿತಾಂಶ ಪಡೆಯಲಾಗಿದೆ. ಉತ್ತೀರ್ಣರಾದವರಲ್ಲಿ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಒಟ್ಟಾರೆ 3244 ವಿದ್ಯಾರ್ಥಿಗಳ ಪೈಕಿ 1936 ವಿದ್ಯಾರ್ಥಿಗಳು ಉತ್ತೀರ್ಣರಾಗುವುದರೊಂದಿಗೆ ಶೇ.59.68 ಮತ್ತು ನಗರ ಪ್ರದೇಶದಲ್ಲಿ 15917 ವಿದ್ಯಾರ್ಥಿಗಳ ಪೈಕಿ 11372 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಶೇ.71.45 ರಷ್ಟು ಫಲಿತಾಂಶದೊಂದಿಗೆ ಜಿಲ್ಲೆಗೆ 69.45 ಹಾಗೂ ರಾಜ್ಯ ಮಟ್ಟದಲ್ಲಿ 20ನೇ ಸ್ಥಾನ ಪಡೆದಿದೆ.

### ಮಹಿಳಾ ಆಯೋಗದ ಅಧ್ಯಕ್ಷರು ಜಿಲ್ಲಾ ಪ್ರವಾಸ

» ದಾವಣಗೆರೆ

ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌದರಿ ಅವರು ಏಪ್ರಿಲ್ 15, 16 ಮತ್ತು 17 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳುವರು. ಏಪ್ರಿಲ್ 14 ರಂದು ರಾತ್ರಿ 8.30 ಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು. ಏಪ್ರಿಲ್ 15 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಯದೇವ ವೃತ್ತದ ಬಳಿ ಬ್ರಾಹ್ಮಣ ಹಾಸ್ಟೆಲ್ ಮುಂಭಾಗದಲ್ಲಿ ದಲಿತ ಸಂರಕ್ಷಣಾ ಸಮಿತಿಯಿಂದ ಹಮ್ಮಿಕೊಂಡಿರುವ ಅಂಬೇಡ್ಕರ್ ಜಯಂತಿ ಕಾರ್ಯಕ್ರಮಲ್ಲಿ ಭಾಗವಹಿಸುವರು. ಮ.1.30 ಕ್ಕೆ ಆವರಗೊಳ್ಳ ಗ್ರಾಮ ವ್ಯಾಪ್ತಿಯ ಕೇಂದ್ರೀಯ ವಿದ್ಯಾಲಯ ಹಿಂಭಾಗದಲ್ಲಿ ವಾಸಿಸುತ್ತಿರುವ ಕುಟುಂಬಗಳ ಸ್ಥಳಕ್ಕೆ ಭೇಟಿ ನೀಡುವರು. ನಂತರ ಸಂಜೆ 5 ಗಂಟೆಗೆ ದಾವಣಗೆರೆ ವಿಶ್ವವಿದ್ಯಾನಿಲಯದ ಮಹಿಳಾ ವಸತಿ ನಿಲಯಕ್ಕೆ ಭೇಟಿ ನೀಡಿ ವಾಸ್ತವ್ಯ ಮಾಡುವರು. ಏಪ್ರಿಲ್ 16 ರಂದು ಬೆಳಿಗ್ಗೆ 10.30ಕ್ಕೆ ಜಗಳೂರು ತಾಲ್ಲೂಕು ಆಸ್ಪತ್ರೆ ಹಾಗೂ ತಾಲ್ಲೂಕು ಕಚೇರಿಗೆ ಭೇಟಿ ನೀಡುವರು. ಮಧ್ಯಾಹ್ನ 1 ಗಂಟೆಗೆ ಜಗಳೂರು ತಾಲ್ಲೂಕಿನ ಹನುಮಂತಪುರ ಗೊಲ್ಲರಹಟ್ಟಿ ಗ್ರಾಮಕ್ಕೆ ಭೇಟಿ ನೀಡುವರು ನಂತರ ಸಂಜೆ 5 ಗಂಟೆಗೆ ದಾವಣಗೆರೆಯಲ್ಲಿ ಬಾಲಕಿಯರ ಮೆಟ್ರಿಕ್ ನಂತರ ಹಾಸ್ಟೆಲ್‌ಗೆ ಭೇಟಿ ನೀಡಿ ವಾಸ್ತವ್ಯ ಮಾಡುವರು. ಏಪ್ರಿಲ್ 17 ರಂದು ಬೆಳಿಗ್ಗೆ 10 ಗಂಟೆಗೆ ದಾವಣಗೆರೆ ಜಿಲ್ಲಾ ಆಸ್ಪತ್ರೆಗೆ ಭೇಟಿ, ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿವಿಧ ವಿಷಯಗಳ ಕುರಿತು ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸುವರು.

## ದ್ವಿತೀಯ ಪಿಯುಸಿ ಪರೀಕ್ಷೆ–1 ಫಲಿತಾಂಶ ಪ್ರಕಟ

# ಜಿಲ್ಲೆಯಲ್ಲಿ 59% ವಿದ್ಯಾರ್ಥಿಗಳು ಉತ್ತೀರ್ಣ

» ಚಿತ್ರದುರ್ಗ

ಜಿಲ್ಲೆಯಲ್ಲಿ ಕಳೆದ ಮಾರ್ಚ್ 01 ರಿಂದ 20ರವರೆಗೆ ನಡೆದ ದ್ವಿತೀಯ ಪಿಯುಸಿ ಪರೀಕ್ಷೆ–1ರ ಫಲಿತಾಂಶ ಪ್ರಕಟವಾಗಿದ್ದು, ಜಿಲ್ಲೆಗೆ ಪರೀಕ್ಷೆ–1ರಲ್ಲಿ ಶೇ.59.87 ರಷ್ಟು ಫಲಿತಾಂಶ ಲಭಿಸಿದೆ.

ಕಲಾ ವಿಭಾಗದಲ್ಲಿ ಪರೀಕ್ಷೆಗೆ ಹಾಜರಾದ 4,590 ವಿದ್ಯಾರ್ಥಿಗಳ ಪೈಕಿ 1,684 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ ಪರೀಕ್ಷೆಗೆ ಹಾಜರಾದ 3,746 ವಿದ್ಯಾರ್ಥಿಗಳ ಪೈಕಿ 2,192 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ವಿಜ್ಞಾನ ವಿಭಾಗದಲ್ಲಿ ಪರೀಕ್ಷೆಗೆ ಹಾಜರಾದ 6,425 ವಿದ್ಯಾರ್ಥಿಗಳ ಪೈಕಿ 4,330 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಒಟ್ಟಾರೆಯಾಗಿ ಜಿಲ್ಲೆಯಲ್ಲಿ ಪರೀಕ್ಷೆಗೆ ಹಾಜರಾದ 14761 ವಿದ್ಯಾರ್ಥಿಗಳ ಪೈಕಿ 8206 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಪರೀಕ್ಷೆಗೆ ಹಾಜರಾದ 13,426 ರೆಗ್ಯುಲರ್ ವಿದ್ಯಾರ್ಥಿಗಳ ಪೈಕಿ 8,038 ತೇರ್ಗಡೆಯಾಗಿದ್ದಾರೆ. 1,082 ಪುನರಾವರ್ತಿತ ವಿದ್ಯಾರ್ಥಿಗಳ ಪೈಕಿ 107 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ ಹಾಗೂ 253 ಖಾಸಗಿ ವಿದ್ಯಾರ್ಥಿಗಳ ಪೈಕಿ 61 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ.

ನಗರ ಪ್ರದೇಶದಲ್ಲಿ ಪರೀಕ್ಷೆಗೆ ಹಾಜರಾದ 9,926 ವಿದ್ಯಾರ್ಥಿಗಳ ಪೈಕಿ 5,471 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಗ್ರಾಮೀಣ ಪ್ರದೇಶದಲ್ಲಿ ಪರೀಕ್ಷೆ ಹಾಜರಾದ 4,835 ವಿದ್ಯಾರ್ಥಿಗಳ ಪೈಕಿ 2,735 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳ ವಿವರ: ಕಲಾ ವಿಭಾಗದಲ್ಲಿ ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆಯ ಬಿ.ಲಿಂಗಯ್ಯ ಪಿ.ಯು ಕಾಲೇಜು ವಿದ್ಯಾರ್ಥಿ ಪಾಂಡುರಂಗ ಆನೆಗೊಂದಿ 586 (ಶೇ.97.66) ಅಂಕ ಗಳಿಸುವುದರೊಂದಿಗೆ ಜಿಲ್ಲೆಗೆ ಪ್ರಥಮ ಸ್ಥಾನ ಗಳಿಸಿದ್ದಾರೆ. ಹೊಳಲ್ಕೆರೆ ತಾಲ್ಲೂಕಿನ ಮುತ್ತಗದೂರು ಗ್ರಾಮದ ತರಳಬಾಳು ಪಿಯು ಕಾಲೇಜಿನ ಅಂಜುಮನ್ ಬಾನು ಹೆಚ್.ಎಸ್ 581 (ಶೇ.96.83) ಹಾಗೂ ಮೊಳಕಾಲ್ಮೂರು ತಾಲ್ಲೂಕಿನ ಚಿಕ್ಕೋಬನಹಳ್ಳಿ ಶ್ರೀ.ಆಂಜನೇಯ ಪಿಯು ಕಾಲೇಜಿನ ಸಮೀನ ಜೆ. 579 (ಶೇ.96.5) ಅಂಕಗಳಿಸುವುದರೊಂದಿಗೆ ಅನುಕ್ರಮವಾಗಿ ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ಚಿತ್ರದುರ್ಗ ನಗರದ ಎಸ್.ಆರ್.ಎಸ್ ಪಿಯು ಕಾಲೇಜಿನ ವಿದ್ಯಾರ್ಥಿಗಳಾದ ಇಶಿತಾ ಬಿ.ಎನ್ 592 (ಶೇ.98.66), ಸಾಕ್ಷಿ ಎಸ್.ಬಿ 589 (ಶೇ.98.16) ಹಾಗೂ ರಿಯ ಎಸ್ ಕೊಠಾರಿ 588 (ಶೇ.588) ಅಂಕಗಳನ್ನು ಗಳಿಸುವ ಮೂಲಕ ಅನುಕ್ರಮವಾಗಿ ಜಿಲ್ಲೆಗೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದಿದ್ದಾರೆ.

ವಿಜ್ಞಾನ ವಿಭಾಗದಲ್ಲಿ ಚಿತ್ರದುರ್ಗ ನಗರದ ಡಾನ್ ಬಾಸ್ಕೋ ಪಿಯು ಕಾಲೇಜು ವಿದ್ಯಾರ್ಥಿ ಮಾರುತಿ ಎಂ 593 (ಶೇ.98.83) ಅಂಕ ಪಡೆದು ಜಿಲ್ಲೆಗೆ ಪ್ರಥಮ ಸ್ಥಾನ ಗಳಿಸಿದ್ದಾನೆ. ಚಿತ್ರದುರ್ಗ ನಗರದ ಎಸ್.ಆರ್.ಎಸ್ ಪಿಯು ಕಾಲೇಜಿನ ವಿದ್ಯಾರ್ಥಿಗಳಾದ ವಿಜೇತರೆಡ್ಡಿ ಬಿ.ಸಿ 589 (ಶೇ.98.16) ಹಾಗೂ ಅಮರೇಶ್ 587 (ಶೇ.97.83) ಅಂಕಗಳನ್ನು ಗಳಿಸುವ ಮೂಲಕ ಅನುಕ್ರಮವಾಗಿ ಜಿಲ್ಲೆಗೆ ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

### ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿನಿ ತಾಲ್ಲೂಕಿಗೆ ಪ್ರಥಮ






**ಹೊಸದುರ್ಗ :** ಪಟ್ಟಣದ ಎಸ್. ನಿಜಲಿಂಗಪ್ಪ ವಿಜ್ಞಾನ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜಿನ ವಾಣಿಜ್ಯ ವಿಭಾಗದ ಅನುಷಾ ಜೆ ದ್ವಿತೀಯ ಪಿಯುಸಿ ಯಲ್ಲಿ 587 ಅಂಕ ಪಡೆಯುವ ತಾಲ್ಲೂಕಿಗೆ ಪ್ರಥಮ ಹಾಗೂ ಜಿಲ್ಲೆಗೆ 4 ನೇ ಸ್ಥಾನ ಪಡೆದು ಈ ಭಾರಿಯೂ ಸಹಾ ವಿದ್ಯಾರ್ಥಿನಿಯರೇ ಮೇಲುಗೈ ಸಾಧಿಸಿದ್ದಾರೆ.

ಒಟ್ಟು 50 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ ಹಾಗೂ 100 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ವಾಣಿಜ್ಯ ವಿಭಾಗದ ದೀಪ್ತಿ ಎಂ.ಎಸ್ 586, ನಿವೇದಿತಾ 581 ಅಂಕ ಗಳಿಸುವ ಮೂಲಕ ಕ್ರಮವಾಗಿ ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದಿದ್ದಾರೆ.

ವಿಜ್ಞಾನ ವಿಭಾಗದಲ್ಲಿ ನೇಸರ ಎಂ.ಜೆ. 584 ಅಂಕಗಳಿಸಿ, ವಿಜ್ಞಾನ ವಿಭಾಗದಲ್ಲಿ ತಾಲ್ಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಉತ್ತಮ ಅಂಕಗಳಿಸಿರುವ ವಿದ್ಯಾರ್ಥಿಗಳಿಗೆ ಎಸ್ ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು, ಕಾರ್ಯದರ್ಶಿ, ಧರ್ಮದರ್ಶಿಗಳು, ಆಡಳಿತ ಮಂಡಳಿ, ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿದ್ದಾರೆ.

### ಪಿಯುಸಿ ಫಲಿತಾಂಶ; ಕೃಷಿಕನ ಮಗಳಾದ ದಿವ್ಯಶ್ರೀಗೆ ಶೇ.95

» ಹೊಸದುರ್ಗ



2024–25ನೇ ಸಾಲಿನ ಪಿ.ಯು ಪರೀಕ್ಷೆಯಲ್ಲಿ ತಾಲೂಕಿನ ಹುಣವಿನಡು ಗ್ರಾಮದ ಕೃಷಿಕ ಮತ್ತು ಎಲ್.ಐ.ಸಿ ಪ್ರತಿನಿಧಿ ಜಯಣ್ಣ ಎಂಬುವರ ಪುತ್ರಿ ದಿವ್ಯಶ್ರೀ ಎಸ್.ಜೆ 600ಕ್ಕೆ 575 (ಶೇ.95.83) ಅಂಕಗಳನ್ನು ಪಡೆದಿದ್ದಾರೆ.

ಪಟ್ಟಣದ ಆರ್.ಪಿ. ಪಿಯು ಕಾಲೇಜಿನಲ್ಲಿ ಓದುತ್ತಿದ್ದ ವಿದ್ಯಾರ್ಥಿನಿ ದಿವ್ಯಶ್ರೀ ಎಸ್.ಜೆ ಉತ್ತಮ ಅಂಕಗಳನ್ನು ಗಳಿಸುವ ಮೂಲಕ ಕಾಲೇಜು ಆಡಳಿತ ಮಂಡಳಿ, ಪೋಷಕರು ಹಾಗೂ ಸಾರ್ವಜನಿಕರ ಮೆಚ್ಚುಗೆ ಪಡೆದಿದ್ದಾರೆ.

ಉತ್ತಮ ಅಂಕಗಳನ್ನು ಗಳಿಸುವ ಮೂಲಕ ಕಾಲೇಜಿಗೆ ಮತ್ತು ಕುಟುಂಬಕ್ಕೆ ಕೀರ್ತಿ ತಂದಿದ್ದು, ವಿದ್ಯಾರ್ಥಿಯ ಸಾಧನೆಗೆ ಕಾಲೇಜಿನ ಆಡಳಿತ ಮಂಡಳಿಯವರು ಹಾಗೂ ಪೋಷಕರು ಅಭಿನಂದಿಸಿದ್ದಾರೆ.


ಹುಣವಿನಡು ಗ್ರಾಮದ ಪರಿಶಿಷ್ಟ ಪಂಗಡದ ನಾಯಕ ಜನಾಂಗಕ್ಕೆ ಸೇರಿರುವ ಜಯಲಕ್ಷ್ಮಿ ಮತ್ತು ಜಯಣ್ಣ ಎಂಬ ದಂಪತಿಗಳಿಗೆ ಇಬ್ಬರು ಮಕ್ಕಳಿದ್ದು, ವಿದ್ಯಾರ್ಥಿನಿ ದಿವ್ಯಶ್ರೀ ಹಿರಿಯ ಮಗಳಾಗಿದ್ದು, ತರಗತಿಗೆ ನಿತ್ಯವೂ ತಮ್ಮ ಊರಿನ ಮನೆಯಿಂದಲೇ ಓಡಾಡುತ್ತಾ ಅತ್ಯುನ್ನತ್ತ ಶ್ರೇಣಿಯಲ್ಲಿ ಅಂಕ ಪಡೆದು ತೇರ್ಗಡೆಹೊಂದಿ, ಗ್ರಾಮದ ಇನ್ನಿತರ ವಿದ್ಯಾರ್ಥಿಗಳಿಗೆ ಮಾದರಿಯಾಗಿದ್ದಾರೆ.

## ಎಲ್ಲಾ ಧಾರ್ಮಿಕ ಕಾರ್ಯಕ್ರಮ ಜನಕಲ್ಯಾಣಕ್ಕೆ ಮುನ್ನುಡಿ

» ಚಳ್ಳಕೆರೆ

ಸಂಸ್ಕೃತಿ ಮತ್ತು ಸಂಸ್ಕಾರವನ್ನು ಉಳಿಸಿ, ಬೆಳೆಸುವಲ್ಲಿ ಗ್ರಾಮೀಣ ಭಾಗದ ಜನರ ಕೊಡುಗೆ ಅಪಾರವಾಗಿದೆ. ಇಂದಿಗೂ ಸಹ ನಾವು ಎಲ್ಲಾ ರೀತಿಯ ಧಾರ್ಮಿಕ ಕಾರ್ಯಕ್ರಮಗಳಿಗೆ ಉತ್ತಮ ಸಹಕಾರವನ್ನು ಗ್ರಾಮೀಣ ಜನರಿಂದ ಪಡೆಯಬಹುವುದು. ಗ್ರಾಮದಲ್ಲಿ ವೆಂಕಟೇಶ್ವರಸ್ವಾಮಿ, ಆದಿಯಲ್ಲಮ್ಮದೇವಿ ಮತ್ತು ಕೊಲ್ಲಾಪುರದಮ್ಮದೇವಿಯ ಜಾತ್ರೆಯಲ್ಲಿ ಪಾಲ್ಗೊಂಡಿರುವ ಭಕ್ತರ ಸಂಖ್ಯೆ ದೇವರ ಮೇಲೆ ಇರುವ ಅಪಾರವಾದ ಭಕ್ತಿ, ಶ್ರದ್ಧೆಯನ್ನು ತೋರುತ್ತದೆ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಪುಟ 3



## ಶೆಡ್ ನಿರ್ಮಾಣಕ್ಕೆ ತಂದಿದ್ದ 20 ಸಾವಿರ ಬೆಲೆ ಬಾಳುವ ವಸ್ತು ಕಳ್ಳತನ

**ಚಳ್ಳಕೆರೆ:** ತಾಲ್ಲೂಕಿನ ಗೋಪನಹಳ್ಳಿ ಗ್ರಾಮದ ರೈತ ಡಿ.ಈಶ್ವರಪ್ಪ ತಮ್ಮ ಜಮೀನಿನಲ್ಲಿ ನೂತನವಾಗಿ ಕೋಳಿಶೆಡ್ ನಿರ್ಮಿಸುವ ಉದ್ದೇಶದಿಂದ ಕಬ್ಬಿಣದ ಪೈಪ್, ಇತರೆ ವಸ್ತುಗಳನ್ನು ತರಿಸಿದ್ದು ಶೆಡ್ ನಿರ್ಮಾಣ ಆರಂಭಕ್ಕೂ ಮುನ್ನವೇ ಯಾರೋ ಕಳ್ಳರು ರಾತ್ರಿ ಇವರ ಜಮೀನಿಗೆ ನುಗ್ಗಿ ಸುಮಾರು 20ರಿಂದ25 ಸಾವಿರಕ್ಕೂ ಹೆಚ್ಚು ಬೆಲೆ ಬಾಳುವ ಪೈಪ್‌ಗಳನ್ನು ಕದ್ದೊಯ್ದಿದ್ದಾರೆ ಎಂದು ಪೊಲೀಸರಿಗೆ ಮಾಹಿತಿ ನೀಡಲಾಗಿದೆ.

ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿದ ಡಿ.ಈಶ್ವರಪ್ಪ, ಕಳೆದ ಕೆಲವು ದಿನಗಳಿಂದ ಶೆಡ್ ನಿರ್ಮಿಸಲು ಸಿದ್ದತೆಗಳು ನಡೆದಿದ್ದು ಶೆಡ್ ನಿರ್ಮಾಣಕ್ಕೆ ಅವಶ್ಯವಿರುವ ವಸ್ತುಗಳನ್ನು ಜಮೀನಿನಲ್ಲಿ ದಾಸ್ತಾನು ಮಾಡಲಾಗುತ್ತಿತ್ತು. ಸೋಮವಾರ ತಡರಾತ್ರಿ ಯಾರೋ ಕಳ್ಳರು ಜಮೀನಿಗೆ ನುಗ್ಗಿ ಕಳ್ಳರು ಪೈಪ್ ಹಾಗೂ ಬೆಲೆಬಾಳುವ ವಸ್ತುಗಳನ್ನು ಕಳ್ಳತನಮಾಡಿಕೊಂಡು ಹೋಗಿದ್ದಾರೆ. ಸಾಣೀಕೆರೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಪ್ರಮುಖ ಸುದ್ದಿ

### ವಿಶ್ವ ಆರೋಗ್ಯ ದಿನದಲ್ಲಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಸಲಹೆ

# ಆರೋಗ್ಯಕರ ಆರಂಭಗಳೇ ಭರವಸೆಗಳ ಭವಿಷ್ಯ

» ಚಿತ್ರದುರ್ಗ



ತಾಯಿಯ ಮತ್ತು ನವಜಾತ ಶಿಶುವಿನ ಆರೋಗ್ಯದ ಮೇಲೆ ಪರಿಣಾಮ ಬೀರುವ ಅನೇಕ ಆರೋಗ್ಯ ಸಮಸ್ಯೆಗಳ ನಿರ್ವಹಿಸಲು ಆರೋಗ್ಯ ವ್ಯವಸ್ಥೆಗಳು ವಿಕಸನಗೊಳ್ಳಬೇಕು ಎಂದು ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ಹೇಳಿದರು.

ಇಲ್ಲಿನ ಗಾಂಧಿನಗರ ಅಂಗನವಾಡಿ ಕೇಂದ್ರದಲ್ಲಿ ಮಂಗಳವಾರ ವಿಶ್ವ ಆರೋಗ್ಯ ದಿನವನ್ನು ಲಸಿಕಾ ಅಧಿವೇಶನದೊಂದಿಗೆ ನಡೆಸಿ, ಗರ್ಭಿಣಿ, ಬಾಣಂತಿ, ಮಕ್ಕಳ ಕುರಿತು ಅವರು ಮಾತನಾಡಿದರು.

ವಿಶ್ವ ಆರೋಗ್ಯ ದಿನವು, ತಾಯಂದಿರು ಮತ್ತು ನವಜಾತ ಶಿಶುಗಳ ಆರೋಗ್ಯದ ಕುರಿತು ಒಂದು ವರ್ಷವಿಡೀ ನಡೆಯುವ ಅಭಿಯಾನಕ್ಕೆ ನಾಂದಿ ಹಾಡಲಿದೆ. ಆರೋಗ್ಯಕರ ಆರಂಭಗಳು, ಭರವಸೆಯ ಭವಿಷ್ಯಗಳು ಎಂಬ ಶೀರ್ಷಿಕೆಯ ಈ ಅಭಿಯಾನವು , ಸರ್ಕಾರಗಳು ಮತ್ತು ಆರೋಗ್ಯ ಸಮುದಾಯವು ತಡೆಗಟ್ಟಬಹುದಾದ ತಾಯಂದಿರು ಮತ್ತು ನವಜಾತ ಶಿಶುಗಳ ಸಾವುಗಳನ್ನು ಕೊನೆಗೊಳಿಸಲು ಮತ್ತು ಮಹಿಳೆಯರ ದೀರ್ಘಕಾಲೀನ ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ಆದ್ಯತೆ ನೀಡಲು ಪ್ರಯತ್ನಗಳನ್ನು ಹೆಚ್ಚಿಸುವಂತೆ ಒತ್ತಾಯಿಸುತ್ತದೆ ಎಂದು ಹೇಳೀದು.

ಮಹಿಳೆಯರು ಮತ್ತು ಕುಟುಂಬಗಳಿಗೆ ಎಲ್ಲೆಡೆಯೂ ಉತ್ತಮ ಗುಣಮಟ್ಟದ ಆರೈಕೆಯ ಅಗತ್ಯವಿರುತ್ತದೆ. ಅದು ಅವರನ್ನು ದೈಹಿಕವಾಗಿ ಮತ್ತು ಭಾವನಾತ್ಮಕವಾಗಿ, ಹೆರಿಗೆಯ ಮೊದಲು, ಸಮಯದಲ್ಲಿ ಮತ್ತು ನಂತರ ಬೆಂಬಲಿಸುತ್ತದೆ. ತಾಯಿಯ ಮತ್ತು ನವಜಾತ ಶಿಶುವಿನ ಆರೋಗ್ಯದ ಮೇಲೆ ಪರಿಣಾಮ ಬೀರುವ ಅನೇಕ ಆರೋಗ್ಯ ಸಮಸ್ಯೆಗಳನ್ನು ನಿರ್ವಹಿಸಲು ಆರೋಗ್ಯ ವ್ಯವಸ್ಥೆಗಳು ವಿಕಸನಗೊಳ್ಳಬೇಕು. ಇವುಗಳಲ್ಲಿ ನೇರ ಪ್ರಸೂತಿ ತೊಡಕುಗಳು ಮಾತ್ರವಲ್ಲದೆ ಮಾನಸಿಕ ಆರೋಗ್ಯ ಪರಿಸ್ಥಿತಿಗಳು, ಸಾಂಕ್ರಾಮಿಕವಲ್ಲದ ರೋಗಗಳು ಮತ್ತು ಕುಟುಂಬ ಯೋಜನೆ ಕೂಡ ಸೇರಿವೆ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಬಿರು ಬೇಸಿಗೆ ಇರುವುದರಿಂದ ಗರ್ಭಿಣಿಯರು, ಬಾಣಂತಿಯರು ಮಕ್ಕಳ ಸುರಕ್ಷತೆ ಬಗ್ಗೆ ಕಾಳಜಿ ವಹಿಸಿ ಹೆಚ್ಚು ಹೆಚ್ಚು ನೀರು ಕುಡಿಯಿರಿ, ಕರಿದ ಮಸಾಲೆ ಭರಿತ ಪದಾರ್ಥಗಳನ್ನು ಉಪಯೋಗಿಸಬೇಡಿ. ತೆಳುವಾದ ಕಾಟನ್ ಬಟ್ಟೆ ಉಪಯೋಗಿಸಿ ಬಿಸಿಲಿನಲ್ಲಿ ಮಕ್ಕಳನ್ನು ಆಟವಾಡಲು ಬಿಡಬೇಡಿ. ಕಾಲ ಕಾಲಕ್ಕೆ ಮಕ್ಕಳಿಗೆ ಲಸಿಕೆ ಹಾಕಿಸಿ ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀನಿವಾಸ ಮಾತನಾಡಿ, ಕಿಲ್ಕಾರಿ ಕರೆಗಳನ್ನು ಸ್ವಿಕರಿಸಿ, ಉಚಿತ ಮಾಹಿತಿ ಪಡೆದು ಸುರಕ್ಷಿತ ತಾಯ್ತನ ನಿಮ್ಮದಾಗಿಸಿಕೊಳ್ಳಿ ಎಂದರು.

ಕಾರ್ಯಕ್ರಮದಲ್ಲಿ ಆರೋಗ್ಯ ಸುರಕ್ಷತಾ ಅಧಿಕಾರಿ ಸುಜಾತ ಲಸಿಕೆ ನೀಡಿದರು. ಆಶಾ ಕಾರ್ಯಕರ್ತೆ ಪ್ರೇಮ, ಅಂಗನವಾಡಿ ಕಾರ್ಯಕರ್ತೆ ಮಂಜುಳ, ತಾಯಿಮಕ್ಕಳು, ಗರ್ಭಿಣಿಯರು ಇದ್ದರು.

## ಫಾಸ್ಟ್ ನ್ಯೂಸ್

### ಸರ್ವೋತ್ತಮ ಪ್ರಶಸ್ತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ರಾಜ್ಯ ಮಟ್ಟದ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿ, ನೌಕರರಿಗೆ ರಾಜ್ಯ ಸರ್ಕಾರದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಆಯ್ಕೆ ಮಾಡಲು ನಾಮನಿರ್ದೇಶನಗಳನ್ನು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲೆಯಿಂದ ಎರಡು ಹೆಸರುಗಳನ್ನು ರಾಜ್ಯ ಮಟ್ಟದ ಪ್ರಶಸ್ತಿಗೆ ಶಿಫಾರಸ್ಸು ಮಾಡಬೇಕಾಗಿದ್ದು, ಅದರಂತೆ ಜಿಲ್ಲಾ ಮಟ್ಟದಲ್ಲಿ 10 ಅಧಿಕಾರಿ, ನೌಕರರಿಗೆ ಈ ಪ್ರಶಸ್ತಿಯನ್ನು ಪಡೆಯಲು ಅವಕಾಶವಿದೆ. ಸರ್ವೋತ್ತಮ ಸೇವಾ ಪ್ರಶಸ್ತಿಯ 2 ಹಂತದ ಪ್ರಶಸ್ತಿಗಳಿಗೂ ಅರ್ಜಿ ಸಲ್ಲಿಸಬಹುದು. ಪ್ರತಿ ಹಂತಕ್ಕೂ ಪ್ರತ್ಯೇಕವಾಗಿ ತಮ್ಮ ನಾಮನಿರ್ದೇಶನಗಳನ್ನು ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಏಪ್ರಿಲ್ 14 ಕೊನೆಯ ದಿನವಾಗಿರುತ್ತದೆ. ವೆಬ್ ಸೈಟ್ ್ಣಣಠ://ಚಿಡಿತಠಿಣ್ಚಿಟಚಿಚಿತಿಚಿಡಿಜ.ಇಚಿಡಿಟಿಚಿಣಚಿಞಚಿ.ರಠತ.ಟಿ ಅಥವಾ ್ಣಣಠ://ಜಠಿಚಿಡಿಚಿಡಿ.ಇಚಿಡಿಟಿಚಿಣಚಿಞಚಿ.ರಠತ.ಟಿ ಮೂಲಕ ಅರ್ಜಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಜಿಲ್ಲೆಯ ಜಗಳೂರು ತಾಲ್ಲೂಕಿನ ಹಿರೇಮಲ್ಲನಹೊಳೆ ವಿ.ವಿ.ಕೇಂದ್ರದ ಪಕ್ಕದಲ್ಲಿ ಅಸೀನಾ ವಿಂಡ್ ಎನರ್ಜಿ ಪ್ರೈ.ಲಿ.ನವರು ಕಂಬ ಸ್ಥಳಾಂತರಿಸುವ ಕಾಮಗಾರಿ ಹಮ್ಮಿಕೊಂಡಿರುವುದರಿಂದ 66/11 ಕೆವಿ ಹಿರೇಮಲ್ಲನಹೊಳೆ ವಿ.ವಿ ಕೇಂದ್ರದ ವ್ಯಾಪ್ತಿಯಲ್ಲಿ ಏ.9 ರಂದು ಬೆಳಿಗ್ಗೆ 8 ರಿಂದ ಸಂಜೆ 7 ಗಂಟೆಯ ವರೆಗೆ ಎಲ್ಲಾ ಎನ್‌ಜೆವೈ ಮತ್ತು ಐಪಿ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

**ವಿದ್ಯುತ್ ವ್ಯತ್ಯಯ ಉಂಟಾಗುವ ಮಾರ್ಗಗಳು** : ಎಫ್-07 ಭರಮಸಮುದ್ರ, ಎಫ್-08 ಹೊಸಹಟ್ಟಿ, ಎಫ್-11 ಸಂಗೇನಹಳ್ಳಿಯಲ್ಲಿ ಬೆಳಗ್ಗೆ 8 ರಿಂದ ಮಧ್ಯಾಹ್ನ 2ರ ವರೆಗೆ ಹಾಗೂ ಎಫ್-2 ಕಾನನಕಟ್ಟೆ, ಎಫ್-5 ಕಲ್ಲೇದೇವಪುರ, ಎಫ್-6 ಬೆಣ್ಣೆಹಳ್ಳಿ, ಎಫ್-15 ಬಸಪ್ಪನಹಟ್ಟಿ, ಎಫ್-10 ತಿಮ್ಲಾಪುರ ಮತ್ತು ಎಫ್-11 ಸಂಗೇನಹಳ್ಳಿ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕು ಎಂದು ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

### ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

» ದಾವಣಗೆರೆ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಚನ್ನಗಿರಿ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಒಟ್ಟು 19 ಅಂಗನವಾಡಿ ಕಾರ್ಯಕರ್ತೆ, 68 ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ನೇಮಕ ಮಾಡಲು ಅರ್ಹ ಮಹಿಳಾ ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಇಲಾಖೆಯ https://dwcd.karnataka.gov.inರಲ್ಲಿ ಆನ್‌ಲೈನ್ ಸೇವೆಗಳ ಟ್ಯಾಬ್‌ನಲ್ಲಿ ಕಾರ್ಯಕರ್ತೆ, ಸಹಾಯಕಿಯರ ನೇಮಕಾತಿಯ ಸಬ್‌ಟ್ಯಾಬ್‌ನಲ್ಲಿ ಕ್ಲಿಕ್ ಮಾಡುವ ಮೂಲಕ ಆನ್‌ಲೈನ್ ವೆಬ್‌ಸೈಟ್ ವಿಳಾಸ https://karnemakaone.kar.nic.in/abcd/ ಮೂಲಕ ಅರ್ಜಿ ಸಲ್ಲಿಸಲು ಮೇ 9 ಕೊನೆಯ ದಿನವಾಗಿರುತ್ತದೆ. ಚನ್ನಗಿರಿ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ 19 ಅಂಗನವಾಡಿ ಕಾರ್ಯಕರ್ತೆ ಮತ್ತು 68 ಅಂಗನವಾಡಿ ಸಹಾಯಕಿಯರನ್ನು ನೇಮಕಾತಿ ಮಾಡಲು ಈ ಹಿಂದೆ ಭೌತಿಕವಾಗಿ ಅರ್ಜಿ ಆಹ್ವಾನಿಸಲಾಗಿದ್ದು ಇದನ್ನು ಪರಿಗಣಿಸಲಾಗುವುದಿಲ್ಲ, ಈ ಅಭ್ಯರ್ಥಿಗಳು ಸಹ ಹೊಸದಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಅಭ್ಯರ್ಥಿಗಳು ಆನ್‌ಲೈನ್ ತಂತ್ರಾಂಶದಲ್ಲಿ ನಿಗದಿತ ಅರ್ಜಿ ತುಂಬುವುದು, ಭಾವಚಿತ್ರ, ಅಗತ್ಯ ದಾಖಲೆ, ಆಧಾರ್ ಸಂಖ್ಯೆ ನಮೂದಿಸಿ ಇ-ಹಸ್ತಾಕ್ಷರದೊಂದಿಗೆ ಅರ್ಜಿ ಪೂರ್ಣಗೊಳಿಸಬೇಕಾಗಿರುತ್ತದೆ. ನಾಲ್ಕು ವಿವಿಧ ಹಂತದಲ್ಲಿ ಅರ್ಜಿಗಳನ್ನು ಕಡ್ಡಾಯವಾಗಿ ಪೂರ್ಣಗೊಳಿಸಬೇಕು. ಇಲ್ಲವಾದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುವುದು. ವೆಬ್‌ಸೈಟ್‌ನಲ್ಲಿ ತಿಳಿಸಿರುವ ಅಂಶಗಳ ಜೊತೆಗೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವಾಗ ಅಭ್ಯರ್ಥಿಗಳು ಇತರೆ ಅವಶ್ಯಕ ದಾಖಲಾತಿಗಳ ಜೊತೆಗೆ, ವಿಧವೆಯರು ಪತಿಯ ಮರಣ ಪ್ರಮಾಣ ಪತ್ರ ಅಥವಾ ವಿಧವಾ ಪ್ರಮಾಣ ಪತ್ರವನ್ನು ಆನ್‌ಲೈನ್‌ನಲ್ಲಿ ಅಪ್ ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ. ಮುಂದುವರೆದು ಅಭ್ಯರ್ಥಿಗಳ ಆಯ್ಕೆ ಪಟ್ಟಿ ತಯಾರಿಸುವಾಗ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಿರುವ ವಿಧವೆಗೆ ಸಂಬಂಧಿಸಿದ ದಾಖಲಾತಿ ಡೌನ್‌ಲೋಡ್ ಮಾಡಿಕೊಂಡು ಭೌತಿಕವಾಗಿ ಪರಿಶೀಲಿಸಿ ಆಯ್ಕೆ ಪಟ್ಟಿ ತಯಾರಿಸಲಾಗುವುದು. ಆಸಿಡ್ ದಾಳಿಗೆ ತುತ್ತಾದ ಮಹಿಳೆಯರಿಗೆ ಮೊದಲ ಆದ್ಯತೆ, ಇಲಾಖೆಯ ಸಂಸ್ಥೆಗಳ ನಿವಾಸಿಗಳಿಗೆ ಎರಡನೇ ಆದ್ಯತೆ, ವಿಧವೆಯರಿಗೆ ಮೂರನೇ ಆದ್ಯತೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಹರಿಹರ ದೂ.ಸಂ:08192-295444 ನ್ನು ಸಂಪರ್ಕಿಸಲು ಚನ್ನಗಿರಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ತಿಳಿಸಿದ್ದಾರೆ.

# ರಾಜ್ಯದ ಗುತ್ತಿಗೆದಾರರ ಸಮಸ್ಯೆ ಪರಿಹರಿಸುವಲ್ಲಿ ಪ್ರಾಮಾಣಿಕ ಪ್ರಯತ್ನ: ಸಚಿವ ಡಿ.ಸುಧಾಕರ್

» ಚಿತ್ರದುರ್ಗ



ರಾಜ್ಯದಲ್ಲಿ ಗುತ್ತಿಗೆದಾರರಿಗೆ ಅನೇಕ ಸಮಸ್ಯೆಗಳಿವೆ. ಎಲ್ಲವನ್ನು ಸರ್ಕಾರದ ಗಮನಕ್ಕೆ ತಂದು ಪರಿಹರಿಸುವಲ್ಲಿ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಭರವಸೆ ನೀಡಿದರು.

ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘದ ನೂತನ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾಗಿರುವ ಚಿತ್ರದುರ್ಗದ ಆರ್.ಮಂಜುನಾಥ್‌ಗೆ ಜಿಲ್ಲಾ ಗುತ್ತಿಗೆದಾರರ ಸಂಘದಿಂದಎಸ್.ಜೆ.ಕಲ್ಯಾಣಮಂಟಪದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಬಿಜೆಪಿ. ಸರ್ಕಾರ ರಾಜ್ಯದಲ್ಲಿ ಅಧಿಕಾರದಲ್ಲಿದ್ದಾಗಎರಡುಲಕ್ಷಕೋಟಿರೂ.ಗಳಬಿಲ್‌ಬಾಕಿಉಳಿಸಿಕೊಂಡಿರುವುದರಿಂದ ಗುತ್ತಿಗೆದಾರರು ಸಂಕಷ್ಟದಲ್ಲಿದ್ದಾರೆ. ಈಗಿರುವ ನಮ್ಮ ಸರ್ಕಾರ ಹಂತ ಹಂತವಾಗಿ ಗುತ್ತಿಗೆದಾರರ ಬಿಲ್ ಪಾವತಿಸುತ್ತಿದೆ. ರಾಜ್ಯಾದ್ಯಂತ ಗುತ್ತಿಗೆದಾರರ ಹಿತ ಕಾಯುವತ್ತ ನೂತನ ರಾಜ್ಯಾಧ್ಯಕ್ಷ ಆರ್.ಮಂಜುನಾಥ್ ಗಮನ ಕೊಡಬೇಕೆಂದು ಸಚಿವರು ತಿಳಿಸಿದರು.

ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮಾತನಾಡಿ ಚಿತ್ರದುರ್ಗದ ಆರ್.ಮಂಜುನಾಥ್ ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘಕ್ಕೆ ಆಯ್ಕೆಯಾಗಿರುವುದು ಒಂದು ಸಾಧನೆ. ಎಲ್ಲರಿಗೂ ಇಂತಹ ಅವಕಾಶ ಸಿಗುವುದಿಲ್ಲ. ಗುತ್ತಿಗೆದಾರರ ಸಮಸ್ಯೆಗಳಿಗೆ ಮೊದಲಿನಿಂದಲೂ ಸ್ಪಂದಿಸುತ್ತಿರುವ ಆರ್.ಮಂಜುನಾಥ್ ರಾಜ್ಯದಲ್ಲಿರುವ ಗುತ್ತಿಗೆದಾರರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ಮುಟ್ಟಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಬಿಜೆಪಿ. ನಿರ್ಧಾರಗಳು ಗುತ್ತಿಗೆದಾರರಿಗೆ ಪೂರಕವಾಗಿಲ್ಲ. ಅದು ಈಗ ನಮ್ಮ ಸರ್ಕಾರದ ಮೇಲೆ ಹೊರೆಯಾಗಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗುತ್ತಿಗೆದಾರರಿಗೆ ಸಹಾಯ ಹಸ್ತ ಚಾಚುತ್ತಿದ್ದಾರೆ. ದೊಡ್ಡ ಗುತ್ತಿಗೆದಾರ, ಸಣ್ಣ ಗುತ್ತಿಗೆದಾರ ಎನ್ನುವ ವ್ಯತ್ಯಾಸವಿಲ್ಲದೆ ಎಲ್ಲರಿಗೂ ಒಂದೊಂದು ರೀತಿಯ ತೊಂದರೆಗಳಿವೆ. ಸಾಮಾಜಿಕ ನ್ಯಾಯ ನೀಡುವ ಕೆಲಸವನ್ನು ನಮ್ಮ ಸರ್ಕಾರ ಮಾಡುತ್ತಿದೆ ಎಂದು ಹೇಳಿದರು.

ಮಾಜಿ ಸಚಿವ ಹೆಚ್.ಆಂಜನೇಯ ಮಾತನಾಡಿ ಕಾಮಗಾರಿಗಳಿಗೆ ಕೈಯಿಂದ ಬಂಡವಾಳ ಹೂಡಿ ಗುತ್ತಿಗೆದಾರರು ಸಂಕಷ್ಟದಲ್ಲಿದ್ದಾರೆ. ಗುತ್ತಿಗೆದಾರರು ನಡೆಸುವ ಕಾಮಗಾರಿಗಳು ಸರ್ಕಾರ ಮತ್ತು ಸಮಾಜಕ್ಕೆ ಉಪಯೋಗವಾಗುತ್ತದೆ. 2013 ರಿಂದ 18 ರವರೆಗೆ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಾಗ ಗುತ್ತಿಗೆದಾರರಿಗೆ ಸುವರ್ಣ ಯುಗವಾಗಿತ್ತು. ಗುತ್ತಿಗೆದಾರರಲ್ಲಿಯೂ ಪೈಪೋಟಿಯಿರುವುದರಿಂದ ಟೆಂಡರ್ ಕರೆಯುವ ಮುನ್ನವೇ ಗುತ್ತಿಗೆದಾರರು ಸಂಬಂಧಪಟ್ಟವರನ್ನು ಕಾಣುವಂತ ಕೆಟ್ಟ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು.

ಸಮಯಕ್ಕೆ ಸರಿಯಾಗಿ ನಿಮಗೆ ನೀಡಿರುವ ಅವಧಿಯೊಳಗೆ ಗುತ್ತಿಗೆದಾರರು ಕಾಮಗಾರಿಗಳನ್ನು ಪೂರೈಸಬೇಕು. ಜಿಲ್ಲೆಯಲ್ಲಿಗುತ್ತಿಗೆದಾರರುಪ್ರಾಮಾಣಿಕವಾಗಿ ಕೆಲಸ ಮಾಡಲಿ. ಹಾಕಿದ ಬಂಡವಾಳಕ್ಕೆ ಲಾಭವೂ ಸಿಗಲಿ. ಹಣವಿಲ್ಲದೆ ಟೆಂಡರ್ ಕರೆಯುವ ಕೆಟ್ಟ ಪದ್ದತಿಯನ್ನು ಗುತ್ತಿಗೆದಾರರುಮೊದಲುವಿರೋಧಿಸಬೇಕು. ಸಾಮಾಜಿಕ ನ್ಯಾಯದ ಹರಿಕಾರ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಎಲ್ಲಾ ಜಾತಿಯ ಬಡವರಿಗೂ ಅನುಕೂಲ ಕಲ್ಪಿಸುತ್ತಿದ್ದಾರೆಂದು ಮೆಚ್ಚುಗೆ ವ್ಯಕ್ತಪಡಿಸಿದರು.

ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡುತ್ತ ಆರ್.ಮಂಜುನಾಥ್‌ಗೆ ಗುತ್ತಿಗೆದಾರರ ಸಮಸ್ಯೆಗಳನ್ನು ಬಗೆಹರಿಸುವ ಜವಾಬ್ದಾರಿ ಸಿಕ್ಕಿರುವುದು ಸಂತೋಷದ ಸಂಗತಿ. ರಾಜ್ಯಾದ್ಯಂತ ಗುತ್ತಿಗೆದಾರರ ಹಿತ ಕಾಪಾಡುವತ್ತ ಗಮನ ಕೊಡಬೇಕು. ದೊಡ್ಡ ಗುತ್ತಿಗೆದಾರರಿಗೆ ಸಮಸ್ಯೆಯಿಲ್ಲ. ಮಧ್ಯಮ ಮತ್ತು ಸಣ್ಣ ಗುತ್ತಿಗೆದಾರರು ತೊಂದರೆಯಲ್ಲಿದ್ದಾರೆ. ಅವರ ಪರವಾಗಿ ಗುತ್ತಿಗೆದಾರರ ಸಂಘದ ನೂತನ ರಾಜ್ಯಾಧ್ಯಕ್ಷ ಆರ್.ಮಂಜುನಾಥ್ ನಿಲ್ಲಬೇಕು. ಮಂತ್ರಿಗಳು, ಶಾಸಕರುಗಳಿಂದ ಗುತ್ತಿಗೆದಾರರಿಗೆ ತೊಂದರೆಯಾಗುತ್ತಿಲ್ಲ. ಅಧಿಕಾರಿಗಳಿಂದ ಕಿರುಕುಳ ಅನುಭವಿಸುವಂತಾದಾಗ ಧ್ವನಿ ಎತ್ತಬೇಕು. ಸರ್ಕಾರಗಳು ಯಾವುದೇ ಬರಬಹುದು, ಹೋಗಬಹುದು. ಗುತ್ತಿಗೆದಾರರು ಮಾತ್ರ ನಿರಂತರವಾಗಿರುತ್ತಾರೆ ಎಂದು ಹೇಳಿದರು.

ಅಭಿನಂದನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಇಲ್ಲಿಯವರೆಗೂ ಬೆಂಗಳೂರು ನಗರದವರೆ ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘಕ್ಕೆ ಅಧ್ಯಕ್ಷರಾಗುತ್ತಿದ್ದರು. ಈಗ ಚಿತ್ರದುರ್ಗದ ಆರ್.ಮಂಜುನಾಥ್ ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷರಾಗಿರುವುದು ಜಿಲ್ಲೆಗೆ ಸಂದ ಗೌರವ. ಶಿಸ್ತು, ನೇರ ನಡೆ ನುಡಿಯ ಮನುಷ್ಯ ಆರ್.ಮಂಜುನಾಥ್ ವಿಧಾನಸಭೆ ಚುನಾವಣೆಯಲ್ಲಿ ನನ್ನ ಪರವಾಗಿ ನಿಂತು ಕೆಲಸ ಮಾಡಿದ್ದರಿಂದ ಗೆಲ್ಲಲು ಸಾಧ್ಯವಾಯಿತು. ಸಲಹೆ ಸೂಚನೆಗಳನ್ನು ಕೊಡುವುದರ ಜೊತೆಗೆ ತಪ್ಪು ಹೆಜ್ಜೆ ಇಟ್ಟಾಗ ಸರಿಪಡಿಸುವ ಕೆಲಸವನ್ನು ಮಾಡುತ್ತಿದ್ದಾರೆ. ಸಣ್ಣ ಮತ್ತು ಮಧ್ಯಮ ಗುತ್ತಿಗೆದಾರರ ಸಮಸ್ಯೆಗೆ ಸ್ಪಂದಿಸಿ ಸರ್ಕಾರದ ಮಟ್ಟದಲ್ಲಿ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಕೆಲಸ ಮಾಡಲಿ ಎಂದು ಶುಭ ಹಾರೈಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷ ಆರ್.ಮಂಜುನಾಥ್ ನಾನು ರಾಜ್ಯಾಧ್ಯಕ್ಷನಾಗಲು ಜಿಲ್ಲಾ ಗುತ್ತಿಗೆದಾರರ ಸಂಘದ ಪರಿಶ್ರಮವಿದೆ. ಗುತ್ತಿಗೆದಾರರು ಸಂಕಷ್ಟದಲ್ಲಿದ್ದಾರೆ. ಮೂರ್‍ನಾಲ್ಕು ವರ್ಷಗಳಿಂದ ಬಿಲ್ ಬಾಕಿ ಉಳಿದಿದೆ. ಜಿ.ಎಸ್.ಟಿ.ಸಮಸ್ಯೆಗಳನ್ನು ಎದುರಿಸುತ್ತಿದ್ದೇವೆ.ಹೊಳಲ್ಕೆರೆತಾಲ್ಲೂಕಿನಲ್ಲಿ ಹೊರ ರಾಜ್ಯಗಳಿಂದ ಗುತ್ತಿಗೆದಾರರು ಬಂದು ಕಾಮಗಾರಿಗಳನ್ನು ಮಾಡುತ್ತಿದ್ದಾರೆ. ನಮ್ಮ ಜಿಲ್ಲೆಯಲ್ಲಿಯೇ ಗುಣಮಟ್ಟದ ಕೆಲಸ ಮಾಡುವ ಗುತ್ತಿಗೆದಾರರುಗಳಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರು, ರಾಜ್ಯದ ಮುಖ್ಯಮಂತ್ರಿ ಜೊತೆ ಗುತ್ತಿಗೆದಾರ ಸಭೆ ಕರೆದು ಸಮಸ್ಯೆಗಳನ್ನು ಕೇಳಿ ಟೆಂಡರ್ ಹಾಕಲು ಅವಕಾಶ ಕಲ್ಪಿಸಿಕೊಡಲಿ ಎಂದು ಮನವಿ ಮಾಡಿದರು.

ಹೊಳಲ್ಕೆರೆ ತಾಲ್ಲೂಕಿನಲ್ಲಿ ಸ್ಥಳೀಯ ಗುತ್ತಿಗೆದಾರರಿಗೆ ಅವಕಾಶ ಸಿಗಬೇಕು. ಗುತ್ತಿಗೆದಾರರು ಮರಣ ಹೊಂದಿದರೆ ಐದು ಲಕ್ಷ ರೂ.ಗಳನ್ನು ನೀಡಲಾಗುತ್ತಿತ್ತು. ಈಗ ಹತ್ತು ಲಕ್ಷ ರೂ.ಗಳಿಗೆ ಏರಿಸಲಾಗಿದೆ. ಜಿ.ಎಸ್.ಟಿ. ವ್ಯಾಟ್ ಸಮಸ್ಯೆಯಿದೆ. ಗುತ್ತಿಗೆದಾರರ ಲೈಸೆನ್ಸ್ ನವೀಕರಣ ಅವಧಿಯನ್ನು ಹತ್ತು ವರ್ಷಗಳಿಗೆ ಮಿತಿಗೊಳಿಸಲಾಗಿದೆ.

ಸಣ್ಣ ಸಣ್ಣ ಗುತ್ತಿಗೆದಾರರ ಪರ ಕೆಲಸ ಮಾಡುತ್ತೇನೆ. ಯಾರು ಭಯ ಪಡುವ ಅವಶ್ಯಕತೆಯಿಲ್ಲ. ಮೂವತ್ತು ಸಾವಿರ ಕೋಟಿ ರೂ. ಬಿಲ್ ಬಾಕಿಯಿದೆ. ಅದರಲ್ಲಿ ಹದಿನೈದು ಸಾವಿರ ಕೋಟಿ ರೂ.ಗಳನ್ನು ಕೊಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಭರವಸೆ ಕೊಟ್ಟಿದ್ದಾರೆ. ಕೆಲವು ಸಮಸ್ಯೆಗಳನ್ನು ಹೇಳಿಕೊಳ್ಳಲು ಆಗುವುದಿಲ್ಲ. ನನಗೆ ಸಿಕ್ಕಿರುವ ಅಧಿಕಾರವನ್ನು ಸಮರ್ಥವಾಗಿ ನಿಭಾಯಿಸುತ್ತೇನೆ. ಚಿತ್ರದುರ್ಗ ಜಿಲ್ಲೆಗೆ ಕೆಟ್ಟ ಹೆಸರು ತರುವುದಿಲ್ಲವೆಂದು ಆಶ್ವಾಸನೆ ನೀಡಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಕೆ.ಡಿ.ಪಿ. ಸದಸ್ಯ ಕೆ.ಸಿ.ನಾಗರಾಜ್ ಇವರುಗಳು ಮಾತನಾಡಿದರು.ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಶಶಿಕಲಾ ಸುರೇಶ್‌ಬಾಬು, ಕೆ.ಅನ್ವರ್‌ಪಾಷಸೇರಿದಂತೆಕರ್ನಾಟಕರಾಜ್ಯ ಗುತ್ತಿಗೆದಾರರ ಸಂಘದ ಪದಾಧಿಕಾರಿಗಳು ವೇದಿಕೆಯಲ್ಲಿದ್ದರು. ಜಿಲ್ಲಾ ಗುತ್ತಿಗೆದಾರರ ಸಂಘದ ಅಧ್ಯಕ್ಷ ಮಲ್ಲೇಶಪ್ಪ, ಮೈಲಾರಪ್ಪ ಸೇರಿದಂತೆ ಪದಾಧಿಕಾರಿಗಳು ಹಾಗೂ ಕೆ.ಆರ್.ಮಂಜುನಾಥ್‌ರವರ ಅಪಾರ ಅಭಿಮಾನಿಗಳು ಅಭಿನಂದನಾ ಸಮಾರಂಭದಲ್ಲಿ ಹಾಜರಿದ್ದರು.

## ಅಲೆಮಾರಿ, ಅರೆಅಲೆಮಾರಿಗಳ ವಿವಿಧ ಬೇಡಿಕೆಗಳಿಗಾಗಿ ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ಅಹೋರಾತ್ರಿ ಧರಣಿ

» ಚಿತ್ರದುರ್ಗ




ರಸ್ತೆ ಬದಿಯಲ್ಲಿ ಟೆಂಟ್, ಡೇರೆಗಳನ್ನು ಹಾಕಿಕೊಂಡು ನಿಕೃಷ್ಟವಾಗಿ ಬದುಕುತ್ತಿರುವ ಅಲೆಮಾರಿ ಮತ್ತು ಅರೆಅಲೆಮಾರಿಗಳಿಗೆ ವಸತಿ ಸೌಲಭ್ಯ ಕಲ್ಪಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಏ.21 ಮತ್ತು 22 ರಂದು ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ಅಹೋರಾತ್ರಿ ಧರಣಿ ನಡೆಸುವುದಾಗಿ ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆಅಲೆಮಾರಿ ಹಿಂದುಳಿದ ವರ್ಗಗಳ ಪ್ರವರ್ಗ-1 ಜನಾಂಗಗಳ ಒಕ್ಕೂಟದ ಗೌರವಾಧ್ಯಕ್ಷ ಕೆ.ರವೀಂದ್ರಶೆಟ್ಟಿ ಮಂಗಳೂರು ತಿಳಿಸಿದರು.

ಪ್ರವಾಸಿ ಮಂದಿರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಅಲೆಮಾರಿ ಅರೆಅಲೆಮಾರಿಗಳಿಗೆ ಬದುಕು ಕಟ್ಟಿಕೊಡುವುದಕ್ಕಾಗಿ ಸಚಿವರುಗಳಾದ ಶಿವರಾಜ್ ತಂಗಡಗಿ, ಜಮೀರ್ ಅಹಮದ್ ಇವರುಗಳಿಗೆ ಅನೇಕ ಬಾರಿ ಮನವಿ ಸಲ್ಲಿಸಿದ್ದೇವೆ. ಯಾವುದಕ್ಕೂ ಸ್ಪಂದಿಸುತ್ತಿಲ್ಲ. ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ದಿ ನಿಗಮದ ಅಧ್ಯಕ್ಷನಾಗಿದ್ದಾಗ ರಾಜ್ಯಾದ್ಯಂತ ಪ್ರವಾಸ ಮಾಡಿ ಅಲೆಮಾರಿಗಳ ಶೋಚನೀಯ ಬದುಕನ್ನು ಕಣ್ಣಾರೆ ಕಂಡಿದ್ದೇನೆ. ಡೇರೆಯೂ ಇಲ್ಲದೆ. ಗುಡಿಸಲು ಇಲ್ಲದೆ ಮಳೆ ಗಾಳಿ ಚಳಿಯಲ್ಲಿ ಬದುಕುತ್ತಿದ್ದಾರೆ. ಹಾಗಾಗಿ ರಾಜ್ಯ ಸರ್ಕಾರದ ಗಮನ ಸೆಳೆಯುವುದಕ್ಕಾಗಿ ಧರಣಿಗೆ ಮುಂದಾಗಿದ್ದೇವೆಂದು ಹೇಳಿದರು.

ಹತ್ತು ವರ್ಷಗಳ ಕಾಲ ಟೆಂಟ್‌ಗಳ ವಾಸಿಸುತ್ತಿರುವ ಅಲೆಮಾರಿ ಅರೆಅಲೆಮಾರಿಗಳಿಗೆ ಅವರು ಇರುವ ಕಡೆಯೆ ಜಾಗ ಕೊಡಬೇಕು. ಪ್ರತಿ ಜಿಲ್ಲೆಯಲ್ಲಿಯೂ ಸಮುದಾಯ ಭವನ ನಿರ್ಮಾಣವಾಗಬೇಕು. ಅಂತ್ಯ ಸಂಸ್ಕಾರಕ್ಕಾಗಿ ಪ್ರತಿ ಜಿಲ್ಲೆ, ತಾಲ್ಲೂಕಿನಲ್ಲಿ ಅಲೆಮಾರಿ ರುದ್ರಭೂಮಿಯಾಗಬೇಕು. ಪ್ರತಿಭಾವಂತ ಮಕ್ಕಳಿಗೆ ಉಚಿತ ಶಿಕ್ಷಣ ಕೊಡಬೇಕು. ನೀಟ್ ಮತ್ತು ಸಿ.ಇ.ಟಿ. ಪರೀಕ್ಷೆ ಬರೆಯುವ ಮಕ್ಕಳು ತೊಂದರೆ ಅನುಭವಿಸುತ್ತಿರುವುದರಿಂದ ಎಸ್.ಸಿ. ಎಸ್.ಟಿ. ಮಕ್ಕಳಿಗೆ ಅನುಸರಿಸುತ್ತಿರುವ ಮಾನದಂಡ ಅಲೆಮಾರಿ ಮತ್ತು ಅರೆಅಲೆಮಾರಿ ಮಕ್ಕಳಿಗೂ ಅನ್ವಯವಾಗಬೇಕು. ಕಲಾವಿದರಿಗೆ, ಅಂಗವಿಕಲರಿಗೆ, ವೃದ್ದಾಪ್ಯ ವೇತನ ನೀಡುವಂತೆ ರಾಜ್ಯ ಸರ್ಕಾರದ ಮೇಲೆ ಒತ್ತಡ ಹೇರುವುದಕ್ಕಾಗಿ ಹಮ್ಮಿಕೊಳ್ಳಲಾಗಿರುವ ಅಹೋರಾತ್ರಿ ಧರಣಿಯಲ್ಲಿ ಜಿಲ್ಲೆಯಲ್ಲಿರುವ ಅಲೆಮಾರಿ ಮತ್ತು ಅರೆಅಲೆಮಾರಿಗಳು ತಪ್ಪದೆ ಭಾಗವಹಿಸುವಂತೆ ಕೆ.ರವೀಂದ್ರಶೆಟ್ಟಿ ಮಂಗಳೂರು ಮನವಿ ಮಾಡಿದರು.

ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗಗಳ ಒಕ್ಕೂಟದ ರಾಜ್ಯಾಧ್ಯಕ್ಷ ಪ್ರಕಾಶ್ ಎಂ. ಓ.ಪ್ರತಾಪ್‌ಜೋಗಿ, ರಾಮುಗೋಸಾಯಿ ಎಸ್.ಲಕ್ಷ್ಮಿಕಾಂತ್, ತುಮಕೂರು ಮಂಜುನಾಥ್, ಕುಬೇರದಾಸ್, ತಿಪ್ಪೇಸ್ವಾಮಿ, ಕೊಟ್ರೇಶ್, ಗಿರೀಶ್‌ಜೋಗಿ, ತಿಮ್ಮಯ್ಯ ಮ್ಯಾಕ್ಲೂರಹಳ್ಳಿ ಉಪಸ್ಥಿತರಿದ್ದರು.

## ಮೈಲಹಳ್ಳಿ ಈಶ್ವರ ದೇವಸ್ಥಾನದಲ್ಲಿ ಧಾರ್ಮಿಕ ಕಾರ್ಯಕ್ರಮ



» ಪರಶುರಾಂಪುರ

ಭಾರತದ ಸನಾತನ ಸಂಸ್ಕೃತಿ ಶ್ರೀಮಂತಗೊಳ್ಳಲು ನಮ್ಮ ಧಾರ್ಮಿಕ ಆಚರಣೆಗಳು ಮೂಲ ಕಾರಣವೆಂದು ನಿವೃತ್ತ ಕೆ ಎ ಎಸ್ ಅಧಿಕಾರಿ ಎನ್ ರಘುಮೂರ್ತಿ ತಿಳಿಸಿದರು. ಮೈಲಹಳ್ಳಿ ಗ್ರಾಮದಲ್ಲಿ ಈಶ್ವರ ದೇವಸ್ಥಾನದ ವಿಗ್ರಹ ಪ್ರತಿಷ್ಠಾಪನೆ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿ, ಪಾಶ್ಚಾತ್ಯ ರಾಷ್ಟ್ರಗಳಲ್ಲಿ ತಾಂತ್ರಿಕತೆ ಮತ್ತು ವೈಜ್ಞಾನಿಕತೆ ಬೆಳೆದಿದ್ದರೂ ಕೂಡ ಶಾಂತಿ ನೆಲೆಸಿಲ್ಲ ಆದರೆ ಭಾರತದ ಆಧ್ಯಾತ್ಮಿಕತೆ ಮತ್ತು ಧಾರ್ಮಿಕ ಆಚರಣೆಗಳಿಂದ ಶಾಂತಿ ಮನೆ ಮಾಡಿದೆ ಎಂದರು. ಉಜ್ಜಯಿನಿ ಶ್ರೀಗಳು ಮಾತನಾಡಿ, ಬಡತನವನ್ನು ಮೀರಿ ಇಲ್ಲಿನ ಜನ ಈಶ್ವರನ ಮತ್ತು ಭಕ್ತಿಯ ಆರಾಧನೆ ಮಾಡುತ್ತಾರೆ. ಇಂತಹ ದೇವಸ್ಥಾನಗಳ ಕೈಂಕರ್ಯಗಳನ್ನು ಕೈಗೆತ್ತಿಕೊಳ್ಳುತ್ತಾರೆ. ಚಿತ್ರದುರ್ಗದ ನಾಯಕ ಜನಾಂಗವು ಉಜ್ಜಯಿನಿ ಮಠಕ್ಕೆ ಅನಾದಿಕಾಲದಿಂದಲೂ ಕೂಡ ಸನ್ನಡತೆಯಿಂದ ನಡೆದುಕೊಳ್ಳುತ್ತಾರೆ. ಇದಕ್ಕೆ ಪುರಾಣವೂ ಕೂಡ ಪೂರಕವಾಗಿದೆ ಭಕ್ತಿ ಭಾವನೆಗಳ ಜೊತೆ ಹೆಚ್ಚು ಹೆಚ್ಚುಕುಟುಂಬಗಳು ಉನ್ನತ ಶಿಕ್ಷಣ ಮತ್ತು ವೈಚಾರಿಕತೆ ಬೆಳೆಸಿಕೊಳ್ಳಲು ಇದರ ಮುಖಾಂತರ ಸಾಮಾಜಿಕ ಮತ್ತು ಆರ್ಥಿಕವಾಗಿ ದೃಢವಾಗಬೇಕೆಂದು ಆಶೀರ್ವಚನ ನೀಡಿದರು. ಇದೇ ಸಂದರ್ಭದಲ್ಲಿ ಮುಷ್ಟೂರು ಶ್ರೀಗಳು, ಪಂಚಾಯತಿ ಅಧ್ಯಕ್ಷ ಪಾಲಯ್ಯ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಶಾಂತ, ನಾಗಣ್ಣ, ಪ್ರಹ್ಲಾದ, ಧನಂಜಯ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

### ಶಾರದಾಶ್ರಮದಲ್ಲಿ ರಾಮನವಮಿ ಉತ್ಸವ

## ಪ್ರಭು ಶ್ರೀರಾಮಚಂದ್ರ ಧಾರ್ಮಿಕ ಶಕ್ತಿಯ ಪ್ರತೀಕ : ಮಾತಾಯಿತ್ಯಾಗಮಯಿ

» ಚಳ್ಳಕೆರೆ



ಪ್ರತಿಯೊಬ್ಬ ವ್ಯಕ್ತಿಯೂ ಜೀವನದಲ್ಲಿ ಧನ್ಯತೆಯನ್ನು ಸಾಧಿಸಲು ಶ್ರೀರಾಮನನ್ನು ಆದರ್ಶವಾಗಿಟ್ಟುಕೊಳ್ಳಬೇಕು. ವಿಶೇಷವಾಗಿ ವಾಲ್ಮೀಕಿ ರಚಿಸಿದ ರಾಮಾಯಣದ ಪಾತ್ರಗಳೂ ಸಹ ಜನಸಾಮಾನ್ಯರ ಜೀವನದ ಮೇಲೆ ಅಘಾದವಾದ ಪರಿಣಾಮವನ್ನು ಬೀರಲಿವೆ ಎಂದು ಶಾರದಾಶ್ರಮದ ಮಾತಾಜಿತ್ಯಾಗಮಯಿ ತಿಳಿಸಿದರು.

ಅವರು, ಆಶ್ರಮದಲ್ಲಿ ಮಂಗಳವಾರ ಶ್ರೀರಾಮನವಮಿ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಸತ್ಸಂಗ ಸಭೆಯ ಸಾನಿಧ್ಯವಹಿಸಿ ಮಾತನಾಡಿದರು. ಕಳೆದ ಸಾವಿರಾರು ವರ್ಷಗಳಿಂದ ನಾವೆಲ್ಲರೂ ಅನೇಕ ಧಾರ್ಮಿಕ ವಿಚಾರಗಳಿಂದ ಪ್ರಭಾವಿತರಾಗಿದ್ದೇವೆ, ವಿಶೇಷವಾಗಿ ಈ ನೆಲೆದಲ್ಲಿ ಮಾತ್ರ ಭಗವಂತನ ಬಗ್ಗೆ ಅಪಾರವಾದ ಭಕ್ತಿ, ಶ್ರದ್ದೆ ಇದೆ. ಪ್ರಭುಶ್ರೀರಾಮಚಂದ್ರ ಧಾರ್ಮಿಕ ಶಕ್ತಿಯ ಪ್ರತೀಕವೆಂದರು.ಕಾರ್ಯಕ್ರಮದಲ್ಲಿ ರವೀಂದ್ರನಾಥ, ಸುಬ್ಬಣ್ಣ, ಪ್ರಕಾಶ್, ಸುಮ, ಗುರುನಾಥಗುಪ್ತ, ಟಿ.ಎಂ.ವಿಜಯಕಲಾ, ಶಿಶಿರ, ಲಕ್ಷ್ಮಿದೇವಮ್ಮ, ಮಾಣಿಕ್ಯ, ರತ್ನಮ್ಮ, ಅಂಬುಜಾ,ಸುಮನ,ಗೀತ,ಶಾಂತಕುಮಾರಿ, ಪ್ರೇಮಲೀಲಾ, ಸಂತೋಷ್, ಚೇತನ್, ಲತಾ, ಗೀತ ಡಾ.ಭೂಮಿಕ, ಮಂಜುಳಾ, ವೆಂಕಟೇಶ್, ಕಾವೇರಿ ಎಂ.ಯತೀಶ್ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಏರ್‌ಫೋರ್ಸ್ ಮಾಜಿ ಸೈನಿಕರಿಗೆ; ಸ್ಪರ್ಶ್ ಶಿಬಿರ

» ದಾವಣಗೆರೆ

ರಾಜ್ಯ ಏರ್‌ಫೋರ್ಸ್ ಅಸೋಸಿಯೇಷನ್ ಶಾಖೆಯಿಂದ ಇದೇ ಏಪ್ರಿಲ್ 18 ಮತ್ತು 19 ರಂದು ಶಿವಮೊಗ್ಗದ ನೌಕರರ ಸಂಘದ ಕಟ್ಟಡದಲ್ಲಿ ಏರ್‌ಫೋರ್ಸ್ ಮಾಜಿ ಸೈನಿಕರಿಗೆ "ಸ್ಪರ್ಶ್ ಸಹಾಯಕ ಶಿಬಿರ ಹಮ್ಮಿಕೊಳ್ಳಲಾಗಿದೆ. ಮಾಜಿ ಸೈನಿಕರು ಶಿಬಿರದ ಸದುಪಯೋಗ ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080 23513319, 23411081 ಹಾಗೂ ಇಮೇಲ್ afa.bangalore@gmail.com/afakarnataka@gmail.com ನ್ನು ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ.

### ಏ.10ರಂದು ಭಗವಾನ್ ಮಹಾವೀರ ಜಯಂತಿ

» ದಾವಣಗೆರೆ

ಜಿಲ್ಲಾಡಳಿತ ವತಿಯಿಂದ ಜಿಲ್ಲಾಡಳಿತ ಭವನದಲ್ಲಿ ಏ.10 ರಂದು ಬೆಳಿಗ್ಗೆ 11 ಗಂಟೆಗೆ "ಭಗವಾನ್ ಮಹಾವೀರ ಜಯಂತಿ" ಆಚರಿಸಲಾಗುತ್ತಿದ್ದು, ಜಯಂತಿಗೆ ಸಮಾಜದ ಎಲ್ಲಾ ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಪ್ರಕಟಣೆಯಲ್ಲಿ ಕೋರಿದ್ದಾರೆ.

### ನಾಳೆ ಮಾಂಸ ನಿಷೇದ

» ಹೊಸದುರ್ಗ

ಎಪ್ರಿಲ್ 10 ರಂದು ಗುರುವಾರ ಮಹಾವೀರ ಜಯಂತಿ ಇರುವ ಪ್ರಯುಕ್ತ ಪಟ್ಟಣದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗಡಿಗಳಲ್ಲಿ ಮಾಂಸ ಮಾರಾಟ, ಕುರಿ ಮತ್ತು ಕೋಳಿ ಬಲಿ ಕೊಡುವುದನ್ನ ಸಂಪೂರ್ಣವಾಗಿ ನಿಷೇಧ ಮಾಡಲಾಗಿದೆ ಎಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಒಂದು ವೇಳೆ ಕಾನೂನು ಉಲ್ಲಂಘಿಸಿ ಮಾಂಸ ಮಾರಾಟ ಮಾಡುವುದು ಕಂಡು ಬಂದಲ್ಲಿ ಅಂತವರ ಮತ್ತು ಮಾಂಸ ಮಾರಾಟ ಮಾಡುವ ಅಂಗಡಿಗಳ ವಿರುದ್ಧ ಸೂಕ್ತ ಕ್ರಮ ಜರುಗಿಸಿ ಅಂಗಡಿ ಪರಮಾನಿಗೆ ರದ್ದುಗೋಳಿಸಲಾಗುವುದು ಎಂದು ತಿಳಿಸಿದ್ದಾರೆ.

### ಧಾರ್ಮಿಕ ಕಾರ್ಯಕ್ರಮ ಜನಕಲ್ಯಾಣಕ್ಕೆ ಮುನ್ನುಡಿ

» ಮೊದಲ ಪುಟದಿಂದ

ಅವರು, ಮಂಗಳವಾರ ಪರಶುರಾಮಪುರ ಹೋಬಳಿಯ ಚೌಳೂರು ಗ್ರಾಮಪಂಚಾಯಿತಿ ವ್ಯಾಪ್ತಿಯ ಸೂರನಹಳ್ಳಿಗ್ರಾಮದಲ್ಲಿ ಹಮ್ಮಿಕೊಂಡಿದ್ದ ಜಾತ್ರಾಮಹೋತ್ಸವಕಾರ್ಯಕ್ರಮದಲ್ಲಿಪಾಲ್ಗೊಂಡು ಪೂಜೆ ನೆರವೇರಿಸಿ ಮಾತನಾಡಿದರು. ವಿಶೇಷವಾಗಿ ಈ ಬಾರಿ ಎಲ್ಲಾ ದೇವರುಗಳ ಅನುಗ್ರಹ ನಮ್ಮ ಕ್ಷೇತ್ರದ ಮೇಲಿದೆ. ಕಳೆದ ವರ್ಷಕ್ಕೆ ಹೋಲಿಸಿದಲ್ಲಿ ಈ ವರ್ಷ ಈ ಭಾಗದಲ್ಲಿ ಉತ್ತಮ ಮಳೆಯಾಗಿ ನೀರಿನ ಯಾವುದೇ ಕೊರತೆ ಉಂಟಾಗಿಲ್ಲ, ಗ್ರಾಮದ ಅಭಿವೃದ್ಧಿಯೂ ಸೇರಿದಂತೆ ದೇವಸ್ಥಾನದ ಅಭಿವೃದ್ಧಿಗೆ ಸಂಬಂಧಿಸಿದಂತೆ ಯಾವುದೇ ಸೌಲಭ್ಯಗಳು ಅಗತ್ಯವಿದ್ದಲ್ಲಿ ಪ್ರಾಮಾಣಿಕವಾಗಿ ಒದಗಿಸುವ ಭರವಸೆಯನ್ನು ನೀಡಿದರು.

ಮಾಜಿಯುವ ಕಾಂಗ್ರೆಸ್ ಘಟಕದ ಅಧ್ಯಕ್ಷ ಸಿ.ಎಂ.ಶಿವಕುಮಾರಸ್ವಾಮಿ, ಮುಖಂಡರಾದ ಗಂಗಾಧರ, ತಿಪ್ಪೇಸ್ವಾಮಿ, ತಿಮ್ಮಣ್ಣ, ಮಂಜುನಾಥ ಮುಂತಾದವರು ಉಪಸ್ಥಿತರಿದ್ದರು.

### ಎಂ.ಹುಚ್ಚಯ್ಯಗೆ ಪಿಎಚ್‌ಡಿ

» ಚಳ್ಳಕೆರೆ



ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ಓಬಯ್ಯನಹಟ್ಟಿ ಗ್ರಾಮದ ಮಹದೇವಪ್ಪ ಮತ್ತು ಕಾಮವ್ವರವರ ಪುತ್ರ ಎಂ.ಹುಚ್ಚಯ್ಯರವರಿಗೆ ಹಂಪಿಕನ್ನಡ ವಿಶ್ವವಿದ್ಯಾಲಯ ಡಾಕ್ಟರೇಟ್ ಪದವಿನೀಡಿ ಗೌರವಿಸಲಾಗಿದೆ. ಎಂ.ಹುಚ್ಚಯ್ಯರವರು ಕಂಪ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಚರಿತ್ರೆ ವಿಭಾಗದ ಸಹಪ್ರಾಧ್ಯಾಪಕ ಕೆ.ಮಹೇಶ್ ಮಾರ್ಗದರ್ಶನದಲ್ಲಿ ಕರ್ನಾಟಕ ಪಾಳೇಗಾರರ ಚರಿತ್ರೆ ಲೇಖನಶಾಸ್ತ್ರ ವಿಶ್ಲೇಷಣಾತ್ಮಕ ಅಧ್ಯಯನ ವಿಚಾರದಲ್ಲಿ ಮಹಾಪ್ರಬಂಧವನ್ನು ಮಂಡಿಸಿದ್ದಕ್ಕೆ ಹಂಪಿಕನ್ನಡವಿಶ್ವವಿದ್ಯಾಲಯ ಡಾಕ್ಟರೇಟ್ ನೀಡಿ ಗೌರವಿಸಿದೆ. ಇತ್ತೀಚೆಗೆ ಹಂಪಿಕನ್ನಡ ವಿಶ್ವವಿದ್ಯಾಲಯದಲ್ಲಿ ನಡೆದ 33ನೇ ಘಟಿಕೋತ್ಸವದಲ್ಲಿ ರಾಜ್ಯಪಾಲ ಗೆಹ್ಲೋಟ್ ಹುಚ್ಚಯ್ಯರವರಿಗೆ ಪದವಿಪ್ರಧಾನ ಮಾಡಿದ್ದಾರೆ.

### ಕಾರ್ಯಾಗಾರ

» ಚಿತ್ರದುರ್ಗ

ರಾಷ್ಟ್ರೀಯ ಹೆದ್ದಾರಿ–13 ಪಿಳ್ಳೆಕೆರನಹಳ್ಳಿಯಲ್ಲಿರುವ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಏ. 9 ರ ಇಂದು ಬೆಳಿಗ್ಗೆ 10 ಗಂಟೆಗೆ ಹತ್ತು ಬೆಳದಿಂಗಳ ಕಾರ್ಯಕ್ರಮ ಅಣುಬೋಧನಾ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ದಾವಣಗೆರೆ ಎಂ.ಎಂ.ಶಿಕ್ಷಣ ಮಹಾವಿದ್ಯಾಲಯದ ನಿವೃತ್ತ ಪ್ರಾಚಾರ್ಯರಾದ ಡಾ.ಹೆಚ್.ವಿ.ವಾಮದೇವಪ್ಪ ಕಾರ್ಯಾಗಾರ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಉಪ ಪ್ರಾಚಾರ್ಯರಾದ ಹೆಚ್.ಎನ್.ಶಿವಕುಮಾರ್, ಉಪನ್ಯಾಸಕ ಡಾ.ಜಿ.ಹನುಮಂತರೆಡ್ಡಿ, ಪ್ರೊ.ಓ.ಎಂ. ಮಂಜುನಾಥ್ ಇವರುಗಳು ಪಾಲ್ಗೊಳ್ಳುವರು.

---

### 5ನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷ ಡಾ.ಸಿ.ನಾರಾಯಣಸ್ವಾಮಿ ಹೇಳಿಕೆ

# ಸ್ಥಳೀಯ ಸಂಸ್ಥೆಗಳ ಅನುದಾನ ಹೆಚ್ಚಳಕ್ಕೆ ಶಿಫಾರಸ್ಸು

» ಚಿತ್ರದುರ್ಗ




ನಗರಸಭೆ ಸೇರಿದಂತೆ ಇತರೆ ಸ್ಥಳೀಯ ಸಂಸ್ಥೆಗಳ ಆರ್ಥಿಕ ಸ್ಥಿತಿಗತಿಗಳನ್ನು ಅವಲೋಕಿಸಿ, ಸ್ಥಳೀಯ ಸಂಸ್ಥೆಗಳ ಅನುದಾನ ಹೆಚ್ಚಳಕ್ಕೆ ಶಿಫಾರಸ್ಸು ಮಾಡುವುದಾಗಿ 5ನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷ ಡಾ.ಸಿ.ನಾರಾಯಣಸ್ವಾಮಿ ಹೇಳಿದರು.

ನಗರಸಭೆಯ ಕೌನ್ಸಿಲ್ ಸಭಾಂಗಣದಲ್ಲಿ ಮಂಗಳವಾರ ಚಿತ್ರದುರ್ಗ ನಗರಸಭೆಯ ಚುನಾಯಿತ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಜೊತೆ ಸಮಾಲೋಚನಾ ಸಭೆ ನಡೆಸಿ ಅವರು ಮಾತನಾಡಿದರು.

ಸಂವಿಧಾನದ 75ನೇ ತಿದ್ದುಪಡಿ ನಂತರ, ಸಂವಿಧಾನ 243 (ಐ) ವಿಧಿ ಅನುಸಾರ 5 ವರ್ಷಗಳ ಅವಧಿಗೆ ರಾಜ್ಯಪಾಲರು ರಾಜ್ಯ ಹಣಕಾಸು ಆಯೋಗವನ್ನು ರಚಿಸುತ್ತಾರೆ. ಈ ಆಯೋಗವು ರಾಜ್ಯ ಸರ್ಕಾರ ತೆರಿಗೆ, ಸುಂಕ ಹಾಗೂ ಶುಲ್ಕ ಸಂಗ್ರಹದ ಮೂಲಕ ಗಳಿಸುವ ಆದಾಯವನ್ನು ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳ ನಡುವೆ ಸಮರ್ಪಕವಾಗಿ ಹಂಚಿಕೆ ಮಾಡುವ ಕುರಿತು ಶಿಫಾರಸ್ಸು ನೀಡುತ್ತದೆ. ಮಹಾನಗರ ಪಾಲಿಕೆ, ನಗರಸಭೆ ಸೇರಿದಂತೆ ಇತರೆ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿಗಳಿಗೆ ಮಾತ್ರ ತೆರಿಗೆ ಹಾಗೂ ಸುಂಕ ವಿಧಿಸುವ ಹಕ್ಕಿದೆ. ಸ್ಥಳೀಯ ಸಂಸ್ಥೆಗಳು ಆರ್ಥಿಕವಾಗಿ ಸ್ವಾವಲಂಬಿ ಯಾದರೆ ಮಾತ್ರ ಪ್ರಗತಿ ಸಾಧ್ಯವಾಗುತ್ತದೆ ಎಂದು ಅಧ್ಯಕ್ಷ ಡಾ.ಸಿ.ನಾರಾಯಣಸ್ವಾಮಿ ತಿಳಿಸಿದರು.

**ಮಾರ್ಗಸೂಚಿ ಪರಿಷ್ಕರಣೆಗೆ ಶಿಫಾರಸ್ಸು:** 15ನೇ ಕೇಂದ್ರ ಹಣಕಾಸು ಆಯೋಗ ಕೇಂದ್ರ ಸರ್ಕಾರದ ಅನುದಾನ ಹಂಚಿಕೆಗೆ ಅಳವಡಿಸಿಕೊಂಡಿದ್ದ ಮಾರ್ಗಸೂಚಿಗಳನ್ನು ಪರಿಷ್ಕರಣೆ ಮಾಡುವಂತೆ, 16ನೇ ಕೇಂದ್ರ ಹಣಕಾಸು ಆಯೋಗದ ಅಧ್ಯಕ್ಷರಿಗೆ ಶಿಫಾರಸ್ಸು ಮಾಡುವುದಾಗಿ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷ ಡಾ.ಸಿ.ನಾರಾಯಣಸ್ವಾಮಿ ಈ ಸಂದರ್ಭದಲ್ಲಿ ಹೇಳಿದರು.

ಜನಸಂಖ್ಯೆ ಹಾಗೂ ಭೌಗೋಳಿಕ ಪ್ರದೇಶ ವ್ಯಾಪ್ತಿಯನ್ನು ಪ್ರಮುಖ ಮಾನದಂಡವಾಗಿ ಅನುಸರಿಸಿ 15ನೇ ಕೇಂದ್ರ ಹಣಕಾಸು ಆಯೋಗ, ಕೇಂದ್ರ ಸರ್ಕಾರದ ಅನುದಾನ ಹಂಚಿಕೆಗೆ ಶಿಫಾರಸ್ಸು ಮಾಡಿದೆ. ಇದರಿಂದಾಗಿ ದಕ್ಷಿಣ ಭಾರತದ ರಾಜ್ಯಗಳಿಗೆ ಕಡಿಮೆ ಅನುದಾನ ಲಭಿಸಿದೆ. ಕೇಂದ್ರ ಸರ್ಕಾರವೇ ರೂಪಿಸಿದ ಜನಸಂಖ್ಯೆ ನಿಯಂತ್ರಣ ಕಾರ್ಯಕ್ರಮಗಳನ್ನು ರಾಜ್ಯದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲಾಗಿದೆ. ಇದರಿಂದಾಗಿ ಜನಸಂಖ್ಯೆ ಬೆಳವಣಿಗೆ ದರ ಉತ್ತರದ ರಾಜ್ಯಗಳಿಗೆ ಹೋಲಿಸಿದರೆ ರಾಜ್ಯದಲ್ಲಿ ನಿಯಂತ್ರಣದಲ್ಲಿದೆ.ಇನ್ನುಭೌಗೋಳಿಕವಾಗಿ ವಿಸ್ತೀರ್ಣದಲ್ಲಿ ಉತ್ತರದ ರಾಜ್ಯಗಳಿಗೆ ಹೋಲಿಸಿದರೆ ರಾಜ್ಯಕ್ಕೆ ಕಡಿಮೆ ಅನುದಾನ ಲಭಿಸಿದೆ. ಇದಕ್ಕೆ ವ್ಯತಿರಿಕ್ತವಾಗಿ ಕೇಂದ್ರ ಸರ್ಕಾರಕ್ಕೆ ರಾಜ್ಯದಿಂದ ಹೆಚ್ಚಿನ ತೆರಿಗೆ ಹಾಗೂ ಸುಂಕಗಳು ಸಲ್ಲಿಕೆಯಾಗುತ್ತಿವೆ. ಅನುದಾನ ಹಂಚಿಕೆಯಲ್ಲಿನ ತಾರತಮ್ಯ ಸರಿಪಡಿಸಿ, ರಾಜ್ಯ ತೆರಿಗೆ ಸಂಗ್ರಹದಲ್ಲಿನ ಪಾಲಿಗೆ ಅನುಗುಣವಾಗಿ ಅನುದಾನ ಹಂಚಿಕೆ ಮಾರ್ಗಸೂಚಿಗಳನ್ನು ರಚಿಸಲು ಕೇಂದ್ರ ಹಣಕಾಸು ಆಯೋಗಕ್ಕೆ ಮನವಿ ಮಾಡುವುದಾಗಿ ಹೇಳಿದರು.

ಆಯೋಗದಿಂದ 2024 ಫೆಬ್ರವರಿಯಲ್ಲಿ ರಾಜ್ಯ ಸರ್ಕಾರಕ್ಕೆ ಮಧ್ಯಂತರ ವರದಿಗಳ ಶಿಫಾರಸ್ಸು ಸಲ್ಲಿಸಿದ್ದು, ಇದು ಉಭಯ ಸದನಗಳಲ್ಲಿ ಚರ್ಚೆಯಾಗಿದೆ. ಈ ವರದಿಯನ್ನು ಕೇಂದ್ರ ಸರ್ಕಾರಕ್ಕೂ ಕಳುಹಿಸಿಕೊಡಲಾಗಿದೆ. ಕೇಂದ್ರ ಹಣಕಾಸು ಆಯೋಗದ ನಿಬಂಧನೆಗಳಂತೆ ಎಲ್ಲ ಸ್ಥಳೀಯ ಸಂಸ್ಥೆಗಳಿಗೆ ಕಾಲಕಾಲಕ್ಕೆ ಚುನಾವಣೆ ನಡೆಸಬೇಕು. ರಾಜ್ಯದಲ್ಲಿ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆಗಳು ನಡೆಯದ ಕಾರಣ ರಾಜ್ಯಕ್ಕೆ ಲಭಿಸಬೇಕಾದ ರೂ.2100 ಕೋಟಿ ಅನುದಾನವನ್ನು ಕೇಂದ್ರ ಹಣಕಾಸು ಆಯೋಗ ತಡೆ ಹಿಡಿದಿದೆ. 2026ರ ಮಾರ್ಚ್ ಅಂತ್ಯಕ್ಕೆ 15ನೇ ಕೇಂದ್ರ ಹಣಕಾಸು ಆಯೋಗದ ಅವಧಿ ಮುಕ್ತಾಯವಾಗಲಿದೆ. ಇದರ ಒಳಗಾಗಿ ಈ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಿದರೆ, ತಡೆ ಹಿಡಿದ ರೂ.2100 ಕೋಟಿ ಅನುದಾನವನ್ನು ಬಳಕೆ ಮಾಡಿಕೊಳ್ಳಬಹುದು. ಮುಂಬರುವ ಜೂನ್ ಮಾಹೆಯ ಒಳಗಾಗಿ ರಾಜ್ಯ ಹಣಕಾಸು ಆಯೋಗದಿಂದ ಅಂತಿಮ ಶಿಫಾರಸ್ಸುಗಳುಳ್ಳ ವರದಿಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸುವುದಾಗಿ ಅಧ್ಯಕ್ಷ ಡಾ.ಸಿ. ನಾರಾಯಣಸ್ವಾಮಿ ಹೇಳಿದರು.

ನಗರಸಭೆ ಅಧ್ಯಕ್ಷೆ ಬಿ.ಎನ್. ಸುಮಿತಾ ಮಾತನಾಡಿ, ನಗರಸಭೆಗೆ ತೆರಿಗೆ ಪಾವತಿಯಿಂದಲೇ ಹೆಚ್ಚಿನ ಆದಾಯ ಸಂಗ್ರಹವಾಗಲಿದೆ. ಈ ತೆರಿಗೆ ಸಂಗ್ರಹ ಹಣದಿಂದಲೇ ಪೌರಕಾರ್ಮಿಕರ ವೇತನ ಸೇರಿದಂತೆ ಅನೇಕ ಅಭಿವೃದ್ಧಿ ಕಾಮಗಾರಿಗಳಿಗೂ ಈ ಅನುದಾನದಿಂದಲೇ ಭರಿಸಲಾಗುತ್ತಿದೆ. ಹೀಗಾಗಿ ನಗರಸಭೆಗೆ ಅನುದಾನ ಕಡಿಮೆ ಇರುವುದರಿಂದ ಅಭಿವೃದ್ಧಿ ಕೆಲಸಗಳಿಗೆ ಕಷ್ಟವಾಗಲಿದ್ದು, ಸರ್ಕಾರದಿಂದ ಹೆಚ್ಚಿನ ಆದಾಯದ ಅವಶ್ಯಕತೆ ಇದೆ ಎಂದರು.

ಶಾಂತಿ ಸಾಗರ ಹಾಗೂ ವಾಣಿವಿಲಾಸ ಸಾಗರದಿಂದ ಚಿತ್ರದುರ್ಗ ನಗರಕ್ಕೆ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ಶಾಂತಿಸಾಗರ ಪೈಪ್‌ಲೈನ್ ತುಂಬಾ ಹಾಳಾಗಿದ್ದು, ಹೊಸ ಪೈಪ್‌ಲೈನ್ ಅಳವಡಿಕೆ ಮಾಡಲು ದೊಡ್ಡಮಟ್ಟದ ಅನುದಾನ ಬಿಡುಗಡೆ ಮಾಡಬೇಕು ಎಂದು ರಾಜ್ಯ ಹಣಕಾಸು ಆಯೋಗಕ್ಕೆ ಮನವಿ ಮಾಡಿದರು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾತನಾಡಿ, ಚಿತ್ರದುರ್ಗ ನಗರದಲ್ಲಿ ಕುಡಿಯುವ ನೀರು ನಿರ್ವಹಣಾ ವ್ಯವಸ್ಥೆಗೆ ಹಾಗೂ ನಗರ ಒಳ ಚರಂಡಿ ವ್ಯವಸ್ಥೆಗೆ ಹೆಚ್ಚಿನ ಅನುದಾನಕ್ಕಾಗಿ ವಿಶೇಷ ಪ್ಯಾಕೇಜ್ ಬಿಡುಗಡೆಗೆ ರಾಜ್ಯ ಹಣಕಾಸು ಆಯೋಗದಿಂದ ಶಿಫಾರಸ್ಸು ಮಾಡಿದರೆ ತುಂಬಾ ಅನುಕೂಲವಾಗಲಿದೆ. ಇದರ ಜೊತೆಗೆ ಚಿತ್ರದುರ್ಗ ನಗರದಲ್ಲಿ 2 ಲಕ್ಷಕ್ಕೂ ಹೆಚ್ಚಿನ ಜನಸಂಖ್ಯೆ ಹೊಂದಿದ್ದು, ನಗರಸಭೆಯಲ್ಲಿ ಪೌರಕಾರ್ಮಿಕರು, ತಾಂತ್ರಿಕ ಹುದ್ದೆಗಳು ಸೇರಿದಂತೆ ವಿವಿಧ ಹುದ್ದೆಗಳು ಖಾಲಿ ಇದ್ದು, ಇದರಿಂದ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ, ಸಿಬ್ಬಂದಿಗಳಿಗೆ ಹೆಚ್ಚಿನ ಕೆಲಸದ ಒತ್ತಡವಾಗುತ್ತಿದೆ. ಖಾಲಿ ಇರುವ ಹುದ್ದೆಗಳ ಭರ್ತಿ ನಿಟ್ಟಿನಲ್ಲಿ ನೇಮಕಾತಿಗೆ ಕ್ರಮವಹಿಸುವುದು ಅಗತ್ಯವಾಗಿದೆ ಎಂದು ಹೇಳಿದರು.

ನಗರಸಭೆ ಉಪಾಧ್ಯಕ್ಷೆ ಶ್ರೀದೇವಿ ಮಾತನಾಡಿ, ಚಿತ್ರದುರ್ಗ ನಗರದ 33ನೇ ವಾರ್ಡ್‌ನಲ್ಲಿ ಮಳೆ ಬಂದರೆ ಚರಂಡಿ ನೀರು ಮನೆಗಳಿಗೆ ನುಗ್ಗುತ್ತದೆ. ಚರಂಡಿಗಳು ತುಂಬಾ ಚಿಕ್ಕದಾಗಿದ್ದು, ಇದರಿಂದ ತುಂಬಾ ಸಮಸ್ಯೆಯಾಗುತ್ತಿದೆ. ದೊಡ್ಡ ಚರಂಡಿಗಳ ನಿರ್ಮಾಣ ಮಾಡಬೇಕು ಎಂದು ಸಲಹೆ ನೀಡಿದರು.

ಚಿತ್ರದುರ್ಗ ನಗರಸಭೆಯಲ್ಲಿ ಸಿಬ್ಬಂದಿಯ ಕೊರತೆ ಕಾಡುತ್ತಿದೆ. ಇದರ ಜೊತೆಗೆ ಚಿತ್ರದುರ್ಗ ನಗರಸಭೆ ವ್ಯಾಪ್ತಿಗೆ ಮದಕರಿಪುರ, ಚೋಳಘಟ್ಟ ಸೇರಿದಂತೆ ಐದಾರು ಗ್ರಾಮ ಪಂಚಾಯತಿಗಳು ಸೇರ್ಪಡೆಯಾಗುತ್ತಿವೆ.ಹಾಗಾಗಿನಗರಸಭೆಗೆ ಜನಸಂಖ್ಯೆಗೆ ಅನುಗುಣವಾಗಿ ಸಿಬ್ಬಂದಿ ನೇಮಕ ಮಾಡಿಕೊಳ್ಳಬೇಕು. ಇದರಿಂದ ಸಾರ್ವಜನಿಕರಿಂದ ಅನುಕೂಲವಾಗಲಿದೆ ಎಂದು 5ನೇ ವಾರ್ಡ್ ಸದಸ್ಯ ಹರೀಶ್ ಅಭಿಪ್ರಾಯಪಟ್ಟರು.

ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ನಸರುಲ್ಲಾ ಮಾತನಾಡಿ, ನಗರಸಭೆ ಚುನಾಯಿತ ಪ್ರತಿನಿಧಿಗಳಿಗೆ ನೀಡುವ ಗೌರವಧನ ಮೊತ್ತವನ್ನು ಹೆಚ್ಚಿಸಲು ಮನವಿ ಮಾಡಿದರು. ನಗರಸಭೆ ವಾಣಿಜ್ಯ ಮಳಿಗೆಗಳು ನಗರಸಭೆಗೆ ಪ್ರಮುಖ ಆದಾಯ ಮೂಲ. ಈ ಮಳಿಗೆಗಳ ಟೆಂಡರ್ ವಿಚಾರದಲ್ಲಿ ಸ್ವಲ್ಪ ಗೊಂದಲಗಳು ಇದ್ದು, ಹಾಗಾಗಿ ಇವುಗಳನ್ನು ಸುಲಭವಾಗಿ ಆಗುವ ರೀತಿಯಲ್ಲಿ ಕ್ರಮವಹಿಸಬೇಕು. ಚಿತ್ರದುರ್ಗ ಐತಿಹಾಸಿಕ ನಗರವಾಗಿದೆ. ನಗರದಲ್ಲಿ ರಸ್ತೆಗಳು ಚಿಕ್ಕದಾಗಿದ್ದು, ಹಾಗಾಗಿ ನಗರದ ಅಭಿವೃದ್ಧಿಯ ತುರ್ತು ಅವಶ್ಯಕತೆ ಇದೆ ಸಭೆಗೆ ಸಲಹೆ ನೀಡಿದರು.

ಈ ವೇಳೆ ನಗರಸಭೆಗೆ ಅಗತ್ಯ ಇರುವ ಅನುದಾನಗಳ ಕುರಿತು ಆಯೋಗಕ್ಕೆ ನಗರಸಭೆ ವತಿಯಿಂದ ಮನವಿ ಸಲ್ಲಿಸಲಾಯಿತು. ಸಭೆಯಲ್ಲಿ 5ನೇ ರಾಜ್ಯ ಹಣಕಾಸು ಆಯೋಗದ ಸದಸ್ಯರಾದ ಮೊಹಮದ್ ಸನಾವುಲ್ಲಾ, ಆರ್. ಎಸ್.ಪೋಂಡೆ, ಸಮಾಲೋಚಕರಾದ ಕೆಂಪೇಗೌಡ, ಸುಪ್ರಸನ್ನ, ಆಪ್ತ ಕಾರ್ಯದರ್ಶಿ ಯಾಲಕ್ಕಿಗೌಡ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಸೇರಿದಂತೆ ನಗರಸಭೆ ಸದಸ್ಯರು ಹಾಗೂ ಅಧಿಕಾರಿಗಳು ಇದ್ದರು.

---

# ವೈಭವದಿಂದ ನಡೆದ ಹೊನ್ನೇನಹಳ್ಳಿ ಗ್ರಾಮದ ಆಂಜನೇಯ ಸ್ವಾಮಿ ಶತಮಾನದ ರಥೋತ್ಸವ

» ಹೊಸದುರ್ಗ

ತಾಲೂಕಿನ ಹೊನ್ನೇಹಳ್ಳಿ ಗ್ರಾಮದ ಪ್ರಸಿದ್ಧ ಪವಾಡದ ದೇವರಾದ ಶ್ರೀ ಆಂಜನೇಯ ಸ್ವಾಮಿಯವರ ಶತಮಾನದ ರಥೋತ್ಸವ ಬುಧವಾರ ಬೆಳಿಗ್ಗೆ ಸಹಸ್ರ ಸಹಸ್ರ ಭಕ್ತರ ಸಮ್ಮುಖದಲ್ಲಿ ಅತ್ಯಂತ ವೈಭವಯುತವಾಗಿ ನೆರವೇರಿತು.

ಶ್ರೀ ಆಂಜನೇಯ ಸ್ವಾಮಿಯವರ ರಥೋತ್ಸವಕ್ಕೆ ಇದೀಗ 100 ವರ್ಷ ತುಂಬಿದಂತಾಗಿದೆ. ಇಂತಹ ಶತಮಾನೋತ್ಸವದ ರಥೋತ್ಸವಕ್ಕೆ ನಾಡಿನ ಭಕ್ತರು ಸಾಕ್ಷಿಯಾಗಿ ಭಕ್ತಿಯ ಪರಕಷ್ಟೆ ಮೆರೆಯುವ ಮೂಲಕ ಸ್ವಾಮಿಯವರ ರಥಾರೋಹಣದ ದರ್ಶನ ಮಾಡಿ ಭಕ್ತಿಯಿಂದ ಸಂಭ್ರಮಿಸಿದರು.

ಭವ್ಯವಾದ ಸ್ವಾಮಿಯ ರಥವನ್ನು ಮಂಗಳ ದ್ರವ್ಯಗಳಿಂದ ಹಾಗೂ ವರ್ಣರಂಜಿತ ಪುಷ್ಪ ಮತ್ತು ರಂಗುರಂಗಿನ ವಸ್ತ್ರಗಳಿಂದ ಶೃಂಗರಿಸಿ ಕಳಸ ಸ್ಥಾಪನೆ ಮಾಡಲಾಗಿತ್ತು.

ರಥದ ಸುತ್ತ ಹಸಿರು ತಳಿರು ತೋರಣಗಳಿಂದ ಚಿತ್ತಾಕರ್ಷಕವಾಗಿ ಅಲಂಕರಿಸಲಾಗಿತ್ತು.



ರಥೋತ್ಸವದ ಅಂಗವಾಗಿ ಇಡೀ ಗ್ರಾಮದಲ್ಲಿ ವೈವಿಧ್ಯಮಯ ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸುತ್ತಿತ್ತು, ಜಾನಪದ ವಾದ್ಯಗಳ ನೀನಾದದೊಂದಿಗೆ ಶ್ರೀ ಆಂಜನೇಯ ಸ್ವಾಮಿ ರಥಾರೋಹಣ ಮಾಡಿದರು.

ಈ ದೃಶ್ಯವನ್ನ ನೋಡಲು ನೆರದಿದ್ದ ಭಕ್ತರು ನೂಕು ನೂಕಲಿನಲ್ಲೆ ಮುಗಿಬೀಳುತ್ತಿದ್ದರು ರಥೋತ್ಸವದಲ್ಲಿ ಮುಖ್ಯ ಆಕರ್ಷಣೀಯ ಕೇಂದ್ರ ಬಿಂದು ಶ್ರೀ ಸೋಮದೇವರ ಸಂಭ್ರಮದ ಕುಣಿತ ಜರುಗಿತು, ಊರುಮೆ,ದೋಣು,ಹಲಗೆ,ಓಲಗ,ಕ ಹಳೆಯ ಬಡಿತಕ್ಕೆ ಶ್ರೀ ಸೋಮನ ಲಯಬದ್ಧ ಕುಣಿತ ಜನಮನ ಸೂರೆಗೊಂಡಿತು.

ಅಪಾರ ಸಂಖ್ಯೆಯಲ್ಲಿ ಕಿಕ್ಕಿರಿದು ಸೇರಿದ್ದ ಜನಸ್ತೋಮರಥಎಳೆದನಂತರಆಭರಣಾಲಂಕೃತ ದೇವರ ಪಲ್ಲಕ್ಕಿ ಉತ್ಸವ ಗ್ರಾಮದ ರಾಜಬೀದಿಗಳಲ್ಲಿ ಮೆರವಣಿಗೆ ಜರುಗಿತು.ಉತ್ಸವದುದ್ದಕ್ಕೂ ಶ್ರೀ ಸೋಮನ ಕುಣಿತ ಮುಂದುವರೆದಿತ್ತು,

ಸಂಪ್ರದಾಯದಂತೆ ಶ್ರದ್ಧಾ ಭಕ್ತಿಯಿಂದ ನಡೆದ ರಥೋತ್ಸವದಲ್ಲಿ ಸಹಸ್ರಾರು ಭಕ್ತರು ತೇರು ಎಳೆದು ಪುನೀತರಾದರು. ತೇರು ಹರಿಯುವಾಗ ಭಕ್ತರಿಂದ ಬಾಳೇಹಣ್ಣು ತೂರಾಟ ಹಾಗೂ ಸೋಮನ ಮೇಲೆ ಮಂಡಕ್ಕಿ ತೂರಾಟ ಅತಿ ರಂಜನೀಯವಾಗಿತ್ತು,

---

### ಪೌಷ್ಟಿಕ ಆಹಾರದಿಂದ ಆರೋಗ್ಯ ವೃದ್ಧಿ



**ಹೊಸದುರ್ಗ:** ಬೆಳೆಯುವ ಪೈರು ಮೊಳಕೆಯಲ್ಲಿ ಎಂಬಂತೆ ಮಕ್ಕಳಿಗೆ ಬೆಳೆಯುವ ಹಂತದಲ್ಲಿಯೇ ಪೌಷ್ಟಿಕಾಂಶಯುಕ್ತ ಆಹಾರ ನೀಡಬೇಕು. ಪೌಷ್ಟಿಕ ಆಹಾರದಿಂದ ಉತ್ತಮ ಆರೋಗ್ಯ ವೃದ್ಧಿಸಲು ಸಾಧ್ಯವಾಗುತ್ತದೆ ಎಂದು ಚಿತ್ರದುರ್ಗ ಬಸವೇಶ್ವರ ಆಸ್ಪತ್ರೆ ವೈದ್ಯ ರಾಹುಲ್ ರೆಡ್ಡಿ ಹೇಳಿದರು. ಬಸವೇಶ್ವರ ವೈದ್ಯಕೀಯ ಮಹಾವಿದ್ಯಾಲಯ, ಬಸವೇಶ್ವರ ಆಸ್ಪತ್ರೆ ಹಾಗೂ ಶಿಶು ಅಭಿವೃದ್ಧಿ ಯೋಜನೆ ವತಿಯಿಂದ ಪಟ್ಟಣದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಆವರಣದಲ್ಲಿ ಸೋಮವಾರ ಆಯೋಜಿಸಿದ್ದ ಆರೋಗ್ಯ ತಪಾಸಣೆ ಶಿಬಿರದಲ್ಲಿ ಆರೋಗ್ಯ ತಪಾಸಣೆ ನಡೆಸಿ ಮಾತನಾಡಿದರು. ತೀವ್ರ ಅಪೌಷ್ಟಿಕತೆಯುಳ್ಳ ಮಕ್ಕಳಿಗೆ ಬಸವೇಶ್ವರ ಆಸ್ಪತ್ರೆ ವತಿಯಿಂದ ಉಚಿತ ಚಿಕಿತ್ಸೆ ಹಾಗೂ ಔಷಧ ವಿತರಿಸಲಾಗುತ್ತಿದೆ. ಉಚಿತವಾಗಿ ನೀಡುವುದರಿಂದ ಪೋಷಕರು ಹಾಗೂ ಮಕ್ಕಳಿಗೆ ಅನುಕೂಲವಾಗಲಿದೆ ಎಂದರು. ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅಭಿಲಾಷ ಎ ಮಾತನಾಡಿ, ಮಕ್ಕಳಿಗೆ ಪೌಷ್ಟಿಕಾಂಶಯುಕ್ತ ಆಹಾರ ನೀಡಬೇಕು. ಪೌಷ್ಟಿಕ ಆಹಾರ ಸೇವನೆಯಿಂದ ಮಕ್ಕಳು ಮಾನಸಿಕ ಹಾಗೂ ದೈಹಿಕವಾಗಿ ಸದೃಢಗೊಳ್ಳುತ್ತಾರೆ ಎಂದರು.

---

## ಪ್ರಮುಖ ಸುದ್ದಿ

### ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಸೂಚನೆ

# ಕೃಷಿ ಹೊಂಡ ಹಾಗೂ ಕಲ್ಲು ಕ್ವಾರಿಗಳಿಗೆ ತಂತಿಬೇಲಿ ಅಳವಡಿಸಿ

» ಚಿತ್ರದುರ್ಗ



ಮಕ್ಕಳು ಕೃಷಿಹೊಂಡ ಹಾಗೂ ಕಲ್ಲು ಕ್ವಾರಿಗಳ ನೀರಿನಲ್ಲಿ ಇಳಿಯದಂತೆ ಸುತ್ತಲೂ ತಂತಿ ಬೇಲಿ ಅಳವಡಿಸಲು ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ. ಕೆ.ಟಿ.ತಿಪ್ಪೇಸ್ವಾಮಿ ಸೂಚಿಸಿದರು.

ಕೃಷಿ ಹೊಂಡ ಹಾಗೂ ಕಲ್ಲುಕ್ವಾರಿ ನೀರಿನಲ್ಲಿ ಬಿದ್ದು ಮಕ್ಕಳು ಸಾವನ್ನಪ್ಪುತ್ತಿರುವ ಕುರಿತು ನಗರದ ಜಂಟಿ ಕೃಷಿ ನಿರ್ದೇಶಕ ಕಚೇರಿ ಸಭಾಂಗಣದಲ್ಲಿ, ಸೋಮವಾರ ಕೃಷಿ, ಅಗ್ನಿಶಾಮಕ, ತೋಟಗಾರಿಕೆ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ಕಳೆದ ಮೂರು ವರ್ಷಗಳಲ್ಲಿ ಸುಮಾರು 5000ಕ್ಕೂ ಹೆಚ್ಚು ಮಕ್ಕಳು ನದಿ, ಹಳ್ಳ, ಕೆರೆ, ಬಾವಿ, ಕಲ್ಲು ಕ್ವಾರಿ ಹಾಗೂ ಕೃಷಿ ಹೊಂಡದ ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಪ್ರಕರಣಗಳು ದಾಖಲಾಗಿವೆ. ಇದು ಅತ್ಯಂತ ಶೋಚನೀಯ ಸ್ಥಿತಿಯಾಗಿದೆ. ಚಿತ್ರದುರ್ಗ ಜಿಲ್ಲೆಯಲ್ಲಿಯೂ ಇಂತಹ ಪ್ರಕರಣಗಳು ದಾಖಲಾಗಿವೆ. ಸದ್ಯ ಶೈಕ್ಷಣಿಕ ವರ್ಷ ಮುಕ್ತಾಯವಾಗಿದ್ದು, ಬೇಸಿಗೆ ರಜೆ ಇದೆ. ಮಕ್ಕಳು ಕೃಷಿ ಹೊಂಡ, ಪುಷ್ಕರಣಿ ಹಾಗೂ ಕಲ್ಲು ಕ್ವಾರಿಗಳಲ್ಲಿ ನಿಂತಿರುವ ನೀರಿನಲ್ಲಿ ಈಜಾಡಲು ತೆರಳುತ್ತಾರೆ. ಇದು ಅವಘಡಗಳಿಗೆ ಈಡು ಮಾಡಬಹುದು. ಈ ಹಿನ್ನಲೆಯಲ್ಲಿ ಮಕ್ಕಳ ರಕ್ಷಣಾ ನಿರ್ದೇಶನಾಲಯಮುಂಜಾಗೃತಕ್ರಮವಾಗಿ 2021ರಲ್ಲಿ ಎಸ್.ಓ.ಪಿ ಸಿದ್ದಪಡಿಸಿದೆ. ಇದರಲ್ಲಿ ಸಂಬಂದ ಇಲಾಖೆಗಳು ಕೈಗೊಳ್ಳ ಬೇಕಾದ ಕ್ರಮಗಳ ಕುರಿತು ವಿವರವಾಗಿ ತಿಳಿಸಲಾಗಿದೆ. ಗಣಿ ಮತ್ತು ಭೂ ವಿಜ್ಞಾನ ಹಾಗೂ ಕೃಷಿ ಅಧಿಕಾರಿಗಳು ಕಲ್ಲು ಕ್ವಾರೆ ಹಾಗೂ ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ ಅಳವಡಿಸಬೇಕು. ಅಪಾಯಕಾರಿ ಕಲ್ಲು ಕ್ವಾರಿಗಳು ಗುರುತಿಸಿ ಮುಚ್ಚುವ ಕಾರ್ಯ ಮಾಡಬೇಕು ಎಂದು ಡಾ. ತಿಪ್ಪೇಸ್ವಾಮಿ ಹೇಳಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಮಕ್ಕಳು ಕೆರೆ, ಕೃಷಿ ಹೊಂಡ, ಕಲ್ಲು ಕ್ವಾರೆಗಳ ನೀರಿನಲ್ಲಿ ಬಿದ್ದು ಮಕ್ಕಳು ಸಾವನ್ನಪ್ಪುತ್ತಿರುವ ಪ್ರಕರಣಗಳು ಹೆಚ್ಚುತ್ತಿವೆ. ಇದರಿಂದ ಮಕ್ಕಳ ಜೀವಿಸುವ ಹಕ್ಕನ್ನು ಕಸಿದು ಕೊಂಡಂತಾಗುತ್ತದೆ. ಅಧಿಕಾರಿಗಳು ನಿರ್ಲಕ್ಷ್ಯ ತೋರಬಾರದು. 2023–24ರಿಂದ ಇಲ್ಲಿಯವರೆಗೆ ಜಿಲ್ಲೆಯಲ್ಲಿ ನೀರಿನಲ್ಲಿ ಬಿದ್ದು ಸಾವನ್ನಿಪ್ಪಿರುವ ಕುರಿತು 24 ಪ್ರಕರಣಗಳು ದಾಖಲಾಗಿವೆ. ಇದರಲ್ಲಿ 10 ಜನ ವಯಸ್ಕರರು, 14 ಜನ ಮಕ್ಕಳು ಎನ್ನುವುದು ಆಘಾತಕಾರಿ ಸಂಗತಿಯಾಗಿದೆ ಎಂದು ಡಾ.ಕೆ.ಟಿ.ತಿಪ್ಪೇಸ್ವಾಮಿ ವಿಷಾದ ವ್ಯಕ್ತಪಡಿಸಿದರು. ದಯವಿಟ್ಟು ಎಲ್ಲ ಅಧಿಕಾರಿಗಳು ಮಕ್ಕಳ ಸುರಕ್ಷತಾ ಕ್ರಮಗಳ ಬಗ್ಗೆ ಹೆಚ್ಚಿನ ನಿಗಾ ವಹಿಸಬೇಕು ಎಂದರು. ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ ಸೇರಿದಂತೆ ತೋಟಗಾರಿಕೆ, ಅಗ್ನಿಶಾಮಕ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಉಪಸ್ಥಿರಿದ್ದರು.




# ರಾಮ ನಾಮವ ಜಪಿಸೋ, ಹೇ ಮನುಜ, ರಾಮ ನಾಮವ ಜಪಿಸೋ....

ರಾಮ ನಾಮ ಪಾಯಸಕ್ಕೆ, ಕೃಷ್ಣ ನಾಮ ಸಕ್ಕರೆ, ವಿಠಲನಾಮ ತುಪ್ಪವ ಬೆರೆಸಿ, ಬಾಯಿ ಚಪ್ಪರಿಸೋ......

ಹೀಗೆ ರಾಮ ಭಕ್ತಿಯ ಭಾವ ಗೀತೆಗಳು ಜನಮಾನಸದಲ್ಲಿ ಪ್ರಚಲಿತವಾಗಿದೆ. ಇಂದು ರಾಮನವಮಿ. ಇದೇ ವರ್ಷದಲ್ಲಿ ಬಹಳ ದೀರ್ಘ ವಿವಾದಾತ್ಮಕ ಹೋರಾಟದ ನಂತರ ರಾಮಜನ್ಮಭೂಮಿ ಅಯೋಧ್ಯೆಯಲ್ಲಿ ಬಾಲ ರಾಮನ ಪ್ರಾಣ ಪ್ರತಿಷ್ಠಾಪನೆಯಾಗಿದೆ.....

ಕೆಲವು ಸಂಪ್ರದಾಯವಾದಿಗಳಲ್ಲಿ ಇದು ಒಂದು ಹೆಮ್ಮೆ ಎಂಬಂತೆ ಬಿಂಬಿತವಾಗಿದೆ. ಕೆಲವರಿಗೆ ಮಸೀದಿ ಒಡೆದು ನಿರ್ಮಿಸಿರುವುದು ತಪ್ಪು ಎಂಬ ಅಭಿಪ್ರಾಯವೂ ಇದೆ......

ವಿಷಯ ಏನೇ ಇರಲಿ, ಆದರೆ ಈಗ ಆಗಬೇಕಾಗಿರುವುದು ಕೇವಲ ಭಕ್ತಿ ಮಾತ್ರವಲ್ಲದೆ ವಾಸ್ತವವಾದ ಆಚರಣೆಗಳ ಅಗತ್ಯವಿದೆ. ದೈವ ಭಕ್ತಿ ಅಥವಾ ದೈವ ಶಕ್ತಿ ಕೇವಲ ಹಾಡುಗಳಲ್ಲಿ, ಬರಹಗಳಲ್ಲಿ, ಭಾಷಣಗಳಲ್ಲಿ ಮಾತ್ರ ಆಚರಣೆಯಲ್ಲಿದ್ದರೆ ಅದಕ್ಕೆ ಯಾವುದೇ ಅರ್ಥವೂ ಇರುವುದಿಲ್ಲ. ಅದೊಂದು ಮಾನಸಿಕ ಸಮಾಧಾನಕರ ಸ್ಥಿತಿ ಮಾತ್ರ. ಆದರೆ ಅದು ನಡವಳಿಕೆಯಾಗಿ ಸಮಾಜದಲ್ಲಿ ಆಚರಣೆಗೆ ಬಂದಾಗ ಮಾತ್ರ ಆ ಭಕ್ತಿಗೆ ಒಂದು ಪ್ರಾಮುಖ್ಯತೆ ಮತ್ತು ಅರ್ಥ ಸಿಗುತ್ತದೆ. ಇಲ್ಲದಿದ್ದರೆ ಅದನ್ನು ಪ್ರಜ್ಞಾವಂತ ಸಮೂಹ ಸದಾ ಪ್ರಶ್ನಿಸುತ್ತಲೇ ಇರುತ್ತದೆ.....

ಆ ಕಾರಣದಿಂದ ಅದು ಕಾಲ್ಪನಿಕವೇ ಆಗಿದ್ದರು, ರಾಮ ಕೃಷ್ಣರ ನಿಜವಾದ ಆದರ್ಶಗಳನ್ನು ಮೆಚ್ಚುವವರು, ಪೂಜಿಸುವವರು, ಒಪ್ಪಿದವರು ನೀವಾಗಿದ್ದರೆ ಕನಿಷ್ಠ ಈ ರಾಮನವಮಿಯ ದಿನದಿಂದಲಾದರು ನಿಮ್ಮೊಳಗಡೆ ಈ ರೀತಿಯ ಬದಲಾವಣೆ ಸಾಧ್ಯವಾಗಬೇಕು ಎಂಬ ನಿರೀಕ್ಷೆ ನಮ್ಮದು.....

ಅಂದಿನ ಕಾಲದ ಆ ಮಹಾ ಗ್ರಂಥಗಳ ರಾಮ – ಕೃಷ್ಣರ ಆದರ್ಶಗಳಲ್ಲಿ ಕೆಲವು ಇಂದಿಗೂ ಪ್ರಸ್ತುತ, ಮತ್ತೆ ಕೆಲವು ಅಪ್ರಸ್ತುತ, ಮತ್ತೊಂದಿಷ್ಟು ಅನುಸರಣೆಗೆ ಯೋಗ್ಯವೂ ಅಲ್ಲ. ಇಂದಿನ ಆಧುನಿಕ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅವರ ಆದರ್ಶಗಳ ಕೆಲವು ಒಳ್ಳೆಯ ಅಂಶಗಳನ್ನು ನಾವು ಅಳವಡಿಸಿಕೊಳ್ಳಲು ಸಾಧ್ಯವಾಗುವುದಾದರೆ......

ಮುಖ್ಯವಾಗಿ ಭಾರತ ದೇಶದ ಈ ನೆಲ ಅಪಾರ ಪ್ರಾಕೃತಿಕ ಸಂಪನ್ಮೂಲಗಳನ್ನು ಹೊಂದಿದೆ. ರಾಮ – ಕೃಷ್ಣ ಭಕ್ತರು ಆ ಸಂಪನ್ಮೂಲಗಳನ್ನು ಉಳಿಸಿಕೊಳ್ಳಲು ಎಲ್ಲಾ ಕ್ಷೇತ್ರಗಳ ಎಲ್ಲಾ ಜನರು ನಿರಂತರ ಪ್ರಯತ್ನಿಸಬೇಕಾಗಿದೆ. ಆ ದಂಡಕಾರಣ್ಯ ಅಥವಾ ಆಗಿನ ಆ ಶಕ್ತಿಯುತ ಮಾನಸಿಕ – ದೈಹಿಕ ವ್ಯಕ್ತಿತ್ವ ಅಥವಾ ಆಗಿನ ಕಾಲದ ನೀರಿನ ಸಂಪನ್ಮೂಲಗಳಾಗಲಿ ಎಲ್ಲವೂ ಕೂಡ ಈಗಲೂ ಹಾಗೆಯೇ ಇದೆ. ಆದರೆ ಅದನ್ನು ಉಳಿಸಿಕೊಳ್ಳುವಲ್ಲಿ ನಾವು ವಿಫಲರಾಗಿ ಅದನ್ನು ಮಲಿನಗೊಳಿಸುತ್ತಿದ್ದೇವೆ. ಅದು ನಿಜಕ್ಕೂ ಆ ಪಾತ್ರಗಳಿಗೆ ನಾವು ಮಾಡುತ್ತಿರುವ ಬಹುದೊಡ್ಡ ದ್ರೋಹವಾಗುತ್ತದೆ. ಪ್ರಕೃತಿ ಇಲ್ಲದೆ, ಮನುಷ್ಯನ



ಆರೋಗ್ಯವಿಲ್ಲದೆ ಯಾವ ಭಕ್ತಿ ಆದರ್ಶಗಳು ಯಾವುದೇ ಪ್ರಯೋಜನಕ್ಕೆ ಬರುವುದಿಲ್ಲ. ನಾವು ಮತ ಹಾಕುವ ಮುನ್ನ ಈ ಪರಿಸರವನ್ನ ಉಳಿಸುವ ನಿಟ್ಟಿನಲ್ಲಿ ಯಾರು ಹೆಚ್ಚು ಕೆಲಸ ಮಾಡುತ್ತಾರೆ ಅಂತವರನ್ನು ಗುರುತಿಸಿ ಮತ ಹಾಕಬೇಕು. ಜೊತೆಗೆ ನಮ್ಮ ನಮ್ಮ ವ್ಯಾಪ್ತಿಯಲ್ಲಿ ಪ್ರಕೃತಿಯನ್ನು, ಈ ಭೂಮಿಯನ್ನು ಉಳಿಸುವ ಕೆಲಸವನ್ನು ಮಾಡುವುದೇ ಕೃಷ್ಣ ಮತ್ತು ರಾಮರ ಆದರ್ಶಗಳಿಗೆ ನಾವು ಸಲ್ಲಿಸಬಹುದಾದ ಬಹುದೊಡ್ಡ ಗೌರವ.......

## ಎರಡನೆಯದಾಗಿ,

ಇಲ್ಲಿನ ಸಾಮಾಜಿಕ ವ್ಯವಸ್ಥೆಯಲ್ಲಿ, ಪ್ರಜಾಪ್ರಭುತ್ವದ ದೃಷ್ಟಿಯಲ್ಲಿ ಪ್ರತಿಯೊಬ್ಬ ಭಾರತೀಯ ಪ್ರಜೆಯು ಸಮಾನ ಹಕ್ಕು ಮತ್ತು ಕರ್ತವ್ಯಗಳನ್ನು ಹೊಂದಿದ್ದಾರೆ. ಯಾವುದೇ ಕಾರಣಕ್ಕೂ ಹುಟ್ಟಿನಿಂದಾಗಲಿ, ಹಣದಿಂದಾಗಲಿ, ವಿದ್ಯೆಯಿಂದಾಗಲಿ, ಪ್ರದೇಶಗಳಿಂದಾಗಲಿ, ವರ್ಣಗಳಿಂದಾಗಲಿ,ದೈಹಿಕರಚನೆಗಳಿಂದಾಗಲಿ, ಜಾತಿ ಭಾಷೆಗಳಿಂದಾಗಲಿ ಭೇದ ಭಾವವನ್ನು ಮಾಡಬಾರದು. ಎಲ್ಲರೂ ಸಮಾನರು ಎಂಬ ಆದರ್ಶಗಳನ್ನು ಪಾಲಿಸುವುದು ಅತ್ಯವಶ್ಯಕವಾಗಿದೆ. ಅಂದು ರಾಮ – ಕೃಷ್ಣರ ಕಾಲದಲ್ಲಿ ವರ್ಣಾಶ್ರಮ ವ್ಯವಸ್ಥೆ ಇದ್ದಿರಬಹುದು, ಸಾಮಾಜಿಕ ಅಸಮಾನತೆ ಇದ್ದಿರಬಹುದು, ಆದರೆ ಆ ಆದರ್ಶಗಳನ್ನು ಇಂದಿಗೆ ಪರಿವರ್ತಿಸಿದರೆ ಸಮ ಸಮಾಜದ ಕನಸೇ ಆ ರಾಮಕೃಷ್ಣರ ಆಶಯವು ಆಗಿದ್ದಿರಬೇಕು. ಆದ್ದರಿಂದ ಈಗ ನಾವು ಜಾತಿ ಪದ್ಧತಿಯ, ಮೇಲು ಕೀಳಿನ, ಬಡವ ಶ್ರೀಮಂತರ, ಕಪ್ಪು ಬಿಳುಪಿನ, ಯಾವುದೇ ತಾರತಮ್ಯವನ್ನು ಮಾಡಬಾರದು. ಸಹಜವಾಗಿಯೇ ಪ್ರಕೃತಿಯ ಕೊಡುಗೆಗಳನ್ನು, ವೈವಿಧ್ಯತೆಯನ್ನು ಹಾಗೆಯೇ ಸ್ವೀಕರಿಸಿ ಸಮಾನತೆಯನ್ನು ಸ್ಥಾಪಿಸಲು ಸಾಧ್ಯವಾಗುವುದಾದರೆ ಮಾತ್ರ ರಾಮ – ಕೃಷ್ಣರ ಆದರ್ಶಗಳಿಗೆ ಒಂದು ಅರ್ಥವಿರುತ್ತದೆ. ಇಲ್ಲದಿದ್ದರೆ ಎಲ್ಲವೂ ಕಪಟ ನಾಟಕವಾಗುತ್ತದೆ.......

## ಮೂರನೆಯದಾಗಿ,

ಇಡೀ ರಾಜಕೀಯ ಮತ್ತು ಆಡಳಿತ ವ್ಯವಸ್ಥೆ ಅತ್ಯಂತ ಭ್ರಷ್ಟಾತಿ ಭ್ರಷ್ಟವಾಗಿದೆ. ಬಹಳಷ್ಟು ಜನರು ಹಣಕ್ಕಾಗಿ ತಮ್ಮ ಎಲ್ಲಾ ಮೌಲ್ಯಗಳನ್ನು, ಪ್ರತಿಭೆಗಳನ್ನು, ಆದರ್ಶಗಳನ್ನು, ನಂಬಿಕೆಗಳನ್ನು ಸಾರ್ವಜನಿಕವಾಗಿಯೇ ಹರಾಜು ಹಾಕುತ್ತಿದ್ದಾರೆ. ದುಡ್ಡಿಗಾಗಿ ಯಾವ ನೀಚ ಕೆಲಸಕ್ಕೂ ಕೆಲವು ಜನರು ಸಿದ್ಧರಾಗಿದ್ದಾರೆ. ಭಾರತೀಯ ಮೌಲ್ಯಗಳ ಬೆನ್ನಿಗೆ, ಹೃದಯಕ್ಕೆ ಪ್ರತಿದಿನ ಚುಚ್ಚುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಎಷ್ಟೇ ರಾಮಮಂದಿರಗಳು, ಕೃಷ್ಣಮಂದಿರಗಳು, ಮಸೀದಿಗಳು, ಚರ್ಚುಗಳು ಮುಂತಾದ ಧಾರ್ಮಿಕ ಸ್ಥಳಗಳಿಂದ ಯಾವ ಪ್ರಯೋಜನವೂ ಇರುವುದಿಲ್ಲ. ಆದ್ದರಿಂದ ಈ ರಾಮನವಮಿಯಿಂದ ಕನಿಷ್ಠ ನಮ್ಮದಲ್ಲದ ಆಸ್ತಿ ಅಧಿಕಾರ ಅಂತಸ್ತುಗಳಿಗೆ ಆಸೆಪಡದೆ, ಅದನ್ನು ಗಳಿಸಲು ವಾಮ ಮಾರ್ಗಗಳನ್ನು ಅನುಸರಿಸದೇ, ಶ್ರಮಕ್ಕೆ ತಕ್ಕ ಫಲವನ್ನಷ್ಟೇ ನಿರೀಕ್ಷೆ ಮಾಡಿ, ನಮ್ಮ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುವ ಮುಖಾಂತರ ರಾಮನ ಆದರ್ಶಗಳನ್ನ ವಾಸ್ತವಿಕಕ್ಕೆ ತರಬೇಕಾಗಿದೆ.....

## ನಾಲ್ಕನೆಯದಾಗಿ,

ಇಂದು ಹಣ ಕೇಂದ್ರಿತ ವ್ಯವಸ್ಥೆಯಲ್ಲಿ ಮಾನವೀಯ ಸಂಬಂಧಗಳು ಸಂಪೂರ್ಣ ವ್ಯಾಪಾರಿಕರಣವಾಗಿದೆ. ಕೇವಲ ಗ್ರಾಹಕರು, ವೀಕ್ಷಕರು, ಓದುಗರು, ಕೇಳುಗರು, ಕಕ್ಷಿದಾರರು, ಭಕ್ತರು, ರೋಗಿಗಳು ಮುಂತಾದ ಸಂಬಂಧಗಳು ಮಾತ್ರವಲ್ಲದೆ, ರಕ್ತ ಸಂಬಂಧಗಳು ಸಹ ಬಹುತೇಕ ಶಿಥಿಲಾವಸ್ಥೆ ತಲುಪಿದೆ. ಹಣ, ಜಮೀನಿನ ಕಾರಣಕ್ಕೆ ಮನುಷ್ಯ ಮನಸ್ಸುಗಳು ಒಡೆದು ಚೂರು ಚೂರಾಗಿದೆ. ನ್ಯಾಯಾಲಯಗಳು ತುಂಬಿ ತುಳುಕುತ್ತಿದೆ. ಈ ಎಲ್ಲವೂ ಕೂಡ ಆದರ್ಶಗಳನ್ನು ಮರೆತು ಕೇವಲ ಆಚರಣೆಗೆ ಮಾತ್ರ ನಮ್ಮ ದೈವಭಕ್ತಿಯನ್ನು ಸೀಮಿತಗೊಳಿಸಿದ ಪರಿಣಾಮದಿಂದ ಆಗುತ್ತಿದೆ. ಅದನ್ನು ನಿಗ್ರಹಿಸಿಕೊಳ್ಳದಿದ್ದರೆ ರಾಮ ಮಂದಿರದ ಪ್ರಾಣ ಪ್ರತಿಷ್ಠಾಪನೆಗೆ ಯಾವುದೇ ಅರ್ಥವು ಇರುವುದಿಲ್ಲ......


## ಐದನೆಯದಾಗಿ,

ಚುನಾವಣಾ ಸಂದರ್ಭದಲ್ಲಿ ಈ ದೇಶದ ಸುಮಾರು 100 ಕೋಟಿ ಮತದಾರರಲ್ಲಿ, ಅದರಲ್ಲೂ ಚಲಾವಣೆಯಾಗಬಹುದಾದ ಸುಮಾರು 70 ಕೋಟಿ ಮತದಾರರಲ್ಲಿ, ಒಂದು ಅಂದಾಜಿನ ಪ್ರಕಾರ ಕನಿಷ್ಠ ಶೇಕಡ 50% ರಷ್ಟು ಜನರಾದರು ಯಾವುದೋ ಒಂದು ಪಕ್ಷದಿಂದ ಲಂಚದ ರೂಪದಲ್ಲಿ ಹಣವೋ, ವಸ್ತುವೋ, ಧಾರ್ಮಿಕ ನಂಬಿಕೆಯೋ, ಜಾತಿಯ ದಾಳವೋ ಒಟ್ಟಿನಲ್ಲಿ ಭ್ರಷ್ಟತೆಯನ್ನು ಸ್ವೀಕರಿಸುತ್ತಾರೆ ಅಥವಾ ಭ್ರಷ್ಟಾಚಾರವನ್ನು ಪ್ರೋತ್ಸಾಹಿಸುತ್ತಾರೆ ಮತ್ತು ಅದಕ್ಕಾಗಿ ತಮ್ಮನ್ನು ತಾವು ಮಾರಿಕೊಳ್ಳುತ್ತಾರೆ. ಇಂತಹ ಸಂದರ್ಭದಲ್ಲಿ ರಾಮ – ಕೃಷ್ಣರ ಆದರ್ಶಗಳಿಗೆ ಬೆಲೆ ಏನು ? ಕೃಷ್ಣ ಧರ್ಮಸಂಸ್ಥಾಪನೆಗಾಗಿ ಕೆಲವು ತಂತ್ರ ಕುತಂತ್ರಗಳನ್ನು ಮಾಡಿದ್ದರು ಕೂಡ ಅದರ ಮೂಲ ಉದ್ದೇಶ ಒಳ್ಳೆಯದೇ ಆಗಿರುತ್ತದೆ.

ಆದರೆ ಇಂದು ಅಧರ್ಮ ರಾಜ್ಯದ ಸ್ಥಾಪನೆಗಾಗಿ ಧರ್ಮವನ್ನೇ, ಸಾಂವಿಧಾನಿಕ ಮೌಲ್ಯಗಳನ್ನೇ ಬಲಿಕೊಡುತ್ತಿರುವುದನ್ನು ಗಮನಿಸುತ್ತಿದ್ದೇವೆ. ಒಂದು ಪಕ್ಷದಿಂದ ಗೆದ್ದು ಆ ಮಾತೃ ಪಕ್ಷದ ಬೆನ್ನಿಗೆ ಚೂರಿ ಹಾಕಿ ಹಣ ಪಡೆದು ಇನ್ನೊಂದು ಪಕ್ಷಕ್ಕೆ ಹಾರುವುದು, ಕೆಲವು ರಾಜಕೀಯ ಪಕ್ಷಗಳು ಹಣ ಅಥವಾ ಇತರೆ ಸಂಸ್ಥೆಗಳಿಂದ ಬೆದರಿಕೆ ಒಡ್ಡಿ ಶಾಸಕರನ್ನು ಖರೀದಿ ಮಾಡಿ, ಬಹುಮತದಿಂದ ಆಯ್ಕೆಯಾಗಿರುವ ಸರ್ಕಾರಗಳನ್ನು ಕೆಡವುತ್ತಿರುವುದು, ಅಧರ್ಮಕ್ಕಾಗಿ ಧರ್ಮದ ಹೆಸರನ್ನು ದುರುಪಯೋಗ ಪಡಿಸಿಕೊಳ್ಳುತ್ತಿರುವುದು ನಡೆಯುತ್ತಿದೆ. ಮತದಾರರ ಸಾಕ್ಷಿ ಪ್ರಜ್ಞೆಗೆ ಇದು ತಟ್ಟಬೇಕು.......

ಸರ್ಕಾರದ ಮುಖ್ಯಸ್ಥರು ಇಂದು ಕಳ್ಳತನ ಮೋಸ ವಂಚನೆಗಳು ಸಹಜವಾಗಿ ಇಡೀ ಸಮಾಜವನ್ನು ವ್ಯಾಪಿಸಿರುವಾಗ ಆದರ್ಶಗಳ ಬಗ್ಗೆ ಮಾತನಾಡುವುದು ನಿಜಕ್ಕೂ ನಾಚಿಕೆಗೇಡಿನ ಸಂಗತಿ. ಶ್ರೀ ರಾಮನವಮಿಯ ಹಬ್ಬದಂದು ಇದನ್ನು ಮತ್ತೆ ಮತ್ತೆ ನೆನಪಿಸಲು ಕಾರಣ ಸಮಾಜದ ತಿಳುವಳಿಕೆಗಳು ಕೇವಲ ಪ್ರದರ್ಶನದ ಬೊಂಬೆಗಳಾಗದೆ, ಆತ್ಮ ವಂಚನೆಯ ದಾರಿಗಳಾಗದೆ, ಅದು ನಮ್ಮ ನೈಜ ಮತ್ತು ಸಹಜ ನಡವಳಿಕೆಗಳಾಗಬೇಕು. ದೇವರು ಧರ್ಮ ಭಕ್ತಿ ಒಂದು ಒಣ ಆಡಂಬರವಲ್ಲ, ಅದು ನಮ್ಮ ಆತ್ಮಸಾಕ್ಷಿಯ ನಡವಳಿಕೆಗಳಾಗಬೇಕು. ಆಗ ಮಾತ್ರ ಈ ರೀತಿಯ ಹಬ್ಬಗಳಿಗೆ ಅರ್ಥವಿರುತ್ತದೆ. ಇಲ್ಲದಿದ್ದರೆ ಶತಶತಮಾನಗಳಾದರು ಸಮಾಜದಲ್ಲಿ ಹಣ, ತಂತ್ರಜ್ಞಾನ, ಒಳ್ಳೆಯ ರಸ್ತೆಗಳು, ಒಳ್ಳೆಯ ಕಟ್ಟಡಗಳು, ಒಳ್ಳೆಯ ವಾಹನಗಳು, ಒಳ್ಳೆಯ ಮೊಬೈಲ್ ಗಳು, ಒಳ್ಳೆಯ ಶಾಲೆಗಳು, ಒಳ್ಳೆಯ ಆಸ್ಪತ್ರೆಗಳು, ಒಳ್ಳೆಯ ಬಟ್ಟೆಗಳು, ಒಳ್ಳೆಯ ಶೂಗಳು, ಬರಬಹುದಷ್ಟೇ. ಆದರೆ ಒಳ್ಳೆಯ ಮನುಷ್ಯರು ತೀರಾ ಅಪರೂಪವಾಗುತ್ತಾರೆ. ನಾವು ಬದುಕಬೇಕಾಗಿರುವುದು ಬಹುತೇಕ ಮನುಷ್ಯರ ಜೊತೆಯೇ ಹೊರತು ವಸ್ತುಗಳ ಜೊತೆಗಲ್ಲ. ವಸ್ತುಗಳು ನಮ್ಮ ಅನುಕೂಲಕ್ಕೆ ತಕ್ಕಂತೆ ರೂಪಿಸಿಕೊಂಡಿದ್ದು. ವಸ್ತುಗಳಿಲ್ಲದೆಯೂ ಬದುಕಬಹುದು. ಆದರೆ ಮನುಷ್ಯರಿಲ್ಲದೆ ಬದುಕಲು ಸಾಧ್ಯವೇ ಇಲ್ಲ. ಅದ್ದರಿಂದ ರಾಮನವಮಿಯ ಸಂದರ್ಭದಲ್ಲಿ ನಿಜ ಮನುಷ್ಯರ ಹುಡುಕಾಟದಲ್ಲಿ.......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನ ಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T